ಸಂಪುಟ : 10 ಸಂಚಿಕೆ: 126 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 20 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 126 Pages : 4+2 Price : 3.00 Friday June 20 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂ.20 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 30, 34, 35 ರಲ್ಲಿ ಮೂರಶಿಳ್ಳಿನ ವಕಾರ, ಹೂಗಾರ ಪ್ಲಾಟ್, 1,2,3ನೇ ಕ್ರಾಸ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 14, 13ರಲ್ಲಿ ಗೋಮ್ಸ್ ಬಿಲ್ಡಿಂಗ್, ವಕೀಲರ ಚಾಳ, ಹಣಗಿ ಜೀನ್, ಕುರಡಗಿ ಜನತಾ ಗೋಡೌನ್, ಹಾದಿಮನಿಯವರ ಲೈನ್, ಹೆಡ್ ಪೋಸ್ಟ್ ಆಫೀಸ್ ಫತ್ತೇಪೂರ, ಕಾರಂತ ಡಾ॥ ಸೋನಿಯಾರ, ವಿಜಯ ಶೆಟ್ಟರ್ ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 22ರಲ್ಲಿ ಗಂಗಿಮಡಿ ದೊಡ್ಡಮಸೂತಿ, ಭಾಗಗಳು.ವಾರ್ಡ್ ನಂ. 21, 23 ರಲ್ಲಿ ಮೇರವಾಡೆ, ಭೂಮಾ, ಗುಳಗುಂದಿ, ಚನ್ನಪ್ಪ ಹೊಸ ಲೈನ್, ಹಳೇ ಲೈನ್, ಸ್ಮಶಾನಗಟ್ಟಿ, ಕಮತರ ಪ್ಲಾಟ್, ಅಕ್ಕಿ ಪ್ಲಾಟ್, ಮುನವಳ್ಳಿ ಪ್ಲಾಟ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 12, 28 ಕಾರ್ಕಳವರ, ಗಣಪತಿ ಗುಡಿ, ಅಗಸರ, ಟೋಪಿಯವರ ಲೈನ್, 3ನೇ ಕ್ರಾಸ್, ಜಾಧವ್, ಮಾಲಿ ಪಾಟೀಲ್‌ರ ಲೈನ್, ಮುಧೋಳ,

## ನಾಳೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಸಂಭಾಪೂರ ರೋಡ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಕೆಲಸ ಕೈಗೊಳ್ಳುವುದರಿಂದ ಜೂನ್ 21ರ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಸಂಭಾಪೂರ ರೋಡ್ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ನಿರಂತರ ಜ್ಯೋತಿ, ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗಗಳು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

## ಜು.9ರಂದು ಬಹಿರಂಗ ಹರಾಜು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಲಯದ ಬಿಂಕದಕಟ್ಟಿ ವಿಶ್ರಾಂತಿ ಗೃಹ ಮತ್ತು ಶೆಡ್‌ನಲ್ಲಿರುವ ಹಳೆಯ ನಿರುಪಯುಕ್ತ ವಸ್ತುಗಳ ಬಹಿರಂಗ ಹರಾಜನ್ನು ಗದಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಅವರ ಕಚೇರಿ ಬಿಂಕದಕಟ್ಟಿಯಲ್ಲಿ ದಿ. 9-7-2025ರಂದು ಮಧ್ಯಾಹ್ನ 3:00 ಘಂಟೆಗೆ ಬಹಿರಂಗ ಹರಾಜು ಮಾಡಲಾಗುವುದು ಎಂದು ಸಕಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಾಂತ್ರಿಕ ಸಹಾಯಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ : 08372-200286 ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಉಪ ವಿಭಾಗ ಗದಗ ಇವರ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

### ಜಿಲ್ಲಾ ಮಟ್ಟದ ಪ.ಜಾ/ಪ.ಪಂ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆ

# ಸರಕಾರಿ ಸೌಲಭ್ಯ ಒದಗಿಸಲು ವಿಳಂಬ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಅರ್ಹ ಪರಿಶಿಷ್ಟ ಜಾತಿ/ ಪಂಗಡದ ಫಲಾನುಭವಿಗಳಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಒದಗಿಸುವಲ್ಲಿ ವಿಳಂಬ ಮಾಡಬಾರದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ.ಜಾ/ಪ.ಪಂ. ಸಮುದಾಯದವರ ದೌರ್ಜನ್ಯ ಪ್ರತಿಬಂಧಕ ಕಾಯ್ದೆಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು. ಪ.ಜಾ/ಪ.ಪಂ ದೌರ್ಜನ್ಯ ಪ್ರಕರಣದಡಿ ಅರ್ಹ ಸಂತ್ರಸ್ಥರಿಗೆ ಪರಿಹಾರ ಧನ ಒದಗಿಸುವಲ್ಲಿ ವಿಳಂಬವಾಗಬಾರದು. ಅಧಿಕಾರಿಗಳು ಅರ್ಹರಿಗೆ ಸಾಮಾಜಿಕ ನ್ಯಾಯ ಒದಗಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳ ಕೊರತೆಯಾಗದಂತೆ ಕ್ರಮ ವಹಿಸಬೇಕು ಎಂದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಎಸ್‌ಸಿಎಸ್‌ಟಿ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳು ಇರುವಂತೆ ಕ್ರಮ



ವಹಿಸಬೇಕು. ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಿತಿಗತಿಗಳ ಕೂಲಂಕುಷ ಪರಿಶೀಲನೆ ಮಾಡುವುದು ಸಂಬಂಧಿತ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಅಧಿಕಾರಿಗಳು ಈ ನಿಟ್ಟಿನಲ್ಲಿ ನಿರ್ಲಕ್ಷ್ಯ ವಹಿಸಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ಸಾಮಾಜಿಕ ನ್ಯಾಯ ಒದಗಿಸುವಲ್ಲಿ ಪೊಲೀಸ್ ಇಲಾಖೆ ಕಟಿಬದ್ಧವಾಗಿದೆ. ಪ್ರಕರಣಗಳಿಗೆ ಸಂಬಂಧಿಸಿದಂತೆ ಸಾಕ್ಷ್ಯಾಧಾರಗಳ ಸಂಗ್ರಹವೂ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಎಸ್‌ಸಿ-ಎಸ್‌ಟಿ ಕಾಲೋನಿಗಳಲ್ಲಿ ಸಿಸಿ ರಸ್ತೆ ಕಾಮಗಾರಿ, ಜೆಜೆಎಂ ಕಾಮಗಾರಿ, ಎಸ್‌ಸಿ-ಎಸ್‌ಟಿ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ, ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸುವ ಕುರಿತು ಚರ್ಚಿಸಲಾಯಿತು.

> ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, ಜಿಲ್ಲೆಯಲ್ಲಿ 20-3-2025ರಿಂದ 17-6-2025ರವರೆಗೆ 9 ದೌರ್ಜನ್ಯ ಪ್ರಕರಣಗಳು ನಡೆದಿದ್ದು, 15 ಸಂತ್ರಸ್ತರಿಗೆ (ಎಫ್‌ಐಆರ್ ಹಂತದಲ್ಲಿ) 5 ಲಕ್ಷ ರೂ ಪರಿಹಾರ ಧನ ವಿತರಿಸಲಾಗಿದೆ. 2025-26ನೇ ಸಾಲಿನಲ್ಲಿ (ಮೇ-2025) ಪರಿಶಿಷ್ಟ ಜಾತಿ/ ಪರಿಶಿಷ್ಟ ವರ್ಗದವರ ಕಲ್ಯಾಣಕ್ಕಾಗಿ 122 ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು 18.04 ಲಕ್ಷ ರೂ ವೆಚ್ಚ ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವನಗೌಡ ಕೊಟ್ಟೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಶರೀಫ್ ಬಿಳೆಯಲಿ, ವಿನಾಯಕ ಬಳ್ಳಾರಿ, ಶ್ರೀನಿವಾಸ ದ್ಯಾವನೂರು ಸೇರಿದಂತೆ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

### ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಜನ್ಮ ದಿನಾಚರಣೆ ನಿಮಿತ್ತ ಸಮಾಜಮುಖಿ ಕಾರ್ಯ

# ಸದೃಢ ಸಮಾಜ ನಿರ್ಮಾಣಕ್ಕೆ ಮುಂದಾಗಿ



■ವಿಜಯಸಾಕ್ಷಿ ಸುದ್ದಿ, ರೋಣ

ಭವ್ಯ ಭಾರತಕ್ಕೆ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ನಾಯಕತ್ವ ಅಗತ್ಯವಾಗಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಗುರುವಾರ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ಜನ್ಮ ದಿನಾಚರಣೆ ನಿಮಿತ್ತ ಯುವ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಉಚಿತ ನೇತ್ರ ತಪಸಣಾ ಶಿಬಿರ, ಶಸ್ತ್ರ ಚಿಕಿತ್ಸೆ ಮತ್ತು ಸರಕಾರಿ ಶಾಲೆಯ 1500 ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿರು.

ದೇಶಕ್ಕಾಗಿ, ನಾಡಿನ ಹಿತಕ್ಕಾಗಿ, ದೇಶದಲ್ಲಿನ ಸರ್ವ ಜನಾಂಗದ ಏಕತೆಗಾಗಿ ಗಾಂಧಿ ಮನೆತನ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದೆ. ದೇಶದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷದ ಕೊಡುಗೆ ಅಪಾರ. ಇಂದು ಭಾರತ ದೇಶ ಎತ್ತರದಲ್ಲಿ ಬೆಳೆದು ನಿಲ್ಲಲು ಗಾಂಧಿ ಮನೆತನದ ಕೊಡುಗೆಯೂ ಕಾರಣವಾಗಿದೆ. ರಾಹುಲ್ ಗಾಂಧಿಯವರು ಸುಮಾರು 5 ಸಾವಿರ ಕಿ.ಮೀ ಪಾದಯಾತ್ರೆ ನಡೆಸುವ ಮೂಲಕ ದೇಶದ ಜನರ ಹೃದಯವನ್ನು ಗೆದ್ದಿದ್ದಾರೆ ಎಂದರು.

ರೋಣ ಮತಕ್ಷೇತ್ರದ ಯುವಕರು ರಾಹುಲ್ ಗಾಂಧಿಯವರ ನಾಯಕತ್ವಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು. ಸಂವಿಧಾನದ ಉಳಿವಿಗೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಮೂಲಕ ದೇಶದ ಜನರಲ್ಲಿ ಹೊಸ ಭರವಸೆಯನ್ನು ಮೂಡಿಸಬೇಕು. ಮುಖ್ಯವಾಗಿ ಅವರ ಜನ್ಮದಿನದಂದು ಸಮಾಜಮುಖಿ ಕಾರ್ಯಗಳನ್ನು ಯುವ ಕಾಂಗ್ರೆಸ್ ಹಮ್ಮಿಕೊಂಡಿರುವುದು ಶ್ಲಾಘನೀಯ. ಯುವವಕರು ಸದೃಢ ಸಮಾಜ ಕಟ್ಟುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ರಾಜ್ಯ ಕಾರ್ಯದರ್ಶಿ ಅಕ್ಷಯ ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಪುರಸಭೆ ಅಧ್ಯಕ್ಷೆ ಬಸ್ಸಮ್ಮ ಕೊಪ್ಪದ, ಉಪಾಧ್ಯಕ್ಷ ಹನ್ಮಂತ ತಳ್ಳಿಕೇರಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಮುತ್ತುರಾಜ ನವಲಗುಂದ, ಸೋಮು ನಾಗರಾಜ, ಮೈಲಾರಪ್ಪ ಚಳ್ಳಮರದ, ಆನಂದ ಚಂಗಳಿ, ಶಿವು ಹುಲ್ಲೂರ, ಅಸ್ಲಂ ಕೊಪ್ಪಳ, ಅಭಿಷೇಕ ನವಲಗುಂದ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

> ರಾಹುಲ್ ಗಾಂಧಿಯವರ ದಿಟ್ಟ ನಾಯಕತ್ವಕ್ಕೆ ಬೆದರಿದ ಬಿಜೆಪಿಯವರು ಅವರ ಬಗ್ಗೆ ಇಲ್ಲಸಲ್ಲದ ಟೀಕೆಗಳನ್ನು ಮಾಡಿದರೂ ಸಹ ಅವರು ಭಯಪಡದೇ ಧೈರ್ಯದಿಂದ ಅವುಗಳನ್ನು ಎದುರಿಸಿ ದೇಶದಲ್ಲಿ ಪಕ್ಷದ ಕಾರ್ಯಕರ್ತರನ್ನು ಮತ್ತಷ್ಟು ಮಂಚೂಣಿಗೆ ತಂದರು. ಇಂದು ದೇಶದಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಿಷ್ಠವಾಗಿದ್ದು, ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರಕಾರ ಸ್ಥಾಪನೆಯಾಗುವುದರಲ್ಲಿ ಸಂದೇಹವಿಲ್ಲ ಎಂದು ಶಾಸಕ ಜಿ.ಎಸ್. ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

# ಸ್ವತಃ ರಸ್ತೆ ದುರಸ್ತಿಗೆ ಮುಂದಾದ ರೈತರು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರು ತಮ್ಮ ಹೊಲಕ್ಕೆ ಹೋಗುವ ರಸ್ತೆಗಳ ಸುಧಾರಣೆಗೆ ಹಲವಾರು ಬಾರಿ ಸರಕಾರದ ಬಳಿ ಗೋಗರೆಯುವುದು ಸಾಮಾನ್ಯ ಎನ್ನುವಂತಾಗಿದ್ದು, ಸರಕಾರ ರೈತರ ಮನವಿಗೆ ಕಿವಿಗೊಡದ ಹಿನ್ನೆಲೆಯಲ್ಲಿ ರೈತರೇ 'ನಮ್ಮ ಹೊಲ-ನಮ್ಮ ರಸ್ತೆ' ದುರಸ್ತಿಗೆ ಮುಂದಾಗಿದ್ದಾರೆ.

ಪಟ್ಟಣದಿಂದ ಯತ್ನಳ್ಳಿ ಹೋಗುವ ದಾರಿ ಮಧ್ಯೆ ದನದಮನೆ ಅವರ ಜಮೀನಿನಿಂದ ಸಂಪರ್ಕ ಕಲ್ಪಿಸುವ ರಸ್ತೆಯು ಇತ್ತೀಚೆಗೆ ಸುರಿದ ಭಾರೀ ಮಳೆಗೆ ಸಣ್ಣ ಬ್ರಿಡ್ಜ್ ತುಂಬಿ ಹರಿದ ನೀರಿನ ರಭಸಕ್ಕೆ ದಾರಿ ಕೊಚ್ಚಿಹೋಗಿ ಕೊರಕಲು ಬಿದ್ದಿದ್ದು, ರೈತರಿಗೆ ಅನಾನುಕೂಲವಾಗಿತ್ತು. ಈ ಹಿನ್ನೆಲೆಯಲ್ಲಿ ಜನಪ್ರತಿನಿಧಿಗಳಿಗೆ, ಸಂಬಂಧಿಸಿದ ಇಲಾಖೆಗೆ ಮೌಖಿಕವಾಗಿ ರಸ್ತೆ ಸುಧಾರಣೆ ಮಾಡುವಂತೆ ಮನವಿ ಮಾಡಿದರೂ ಯಾವುದೇ ಸ್ಪಂದನೆ ದೊರೆಯಲಿಲ್ಲ. ಬೇಸತ್ತ ರೈತರು ಗುದ್ದಲಿ-ಸಲಕಿ ಹಿಡಿದು ರಸ್ತೆಗಿಳಿದು ಕಿತ್ತು ಹೋಗಿರುವ ರಸ್ತೆಯನ್ನು ತಾವೇ ದುರಸ್ತಿ ಮಾಡಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಮಹಾದೇವಪ್ಪ ಕುಂದಗೋಳ, ದ್ಯಾಮಣ್ಣ ಕಮತದ, ದುಂಡೇಶ ಕೋಟಗಿ, ಅಕಂಡಯ್ಯ ಅಕಳಂಡಸ್ವಾಮಿಮಠ, ಸೋಮಣ್ಣ ಮಾಗಡಿ, ಸೋಮಣ್ಣ ಹಾದಿಮನಿ ಸೇರಿದಂತೆ ಅನೇಕ ರೈತರು ಇದ್ದರು.

### ಸಾಮೂಹಿಕ ಯೋಗ ನಡಿಗೆಗೆ ಚಾಲನೆ ನೀಡಿದ ಡಿಸಿ ಸಿ.ಎನ್. ಶ್ರೀಧರ್

# ಯೋಗವು ಉತ್ತಮ ಆರೋಗ್ಯದ ಸರಳ ಸೂತ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಯೋಗವು ಮನುಷ್ಯನ ದೈಹಿಕ, ಮಾನಸಿಕ ಹಾಗೂ ಆಧ್ಯಾತ್ಮಿಕ ಆರೋಗ್ಯದ ಸರಳ ಸೂತ್ರವಾಗಿದೆ. ಇಡೀ ಮನುಷ್ಯ ಜನಾಂಗದ ಏಳಿಗೆಗೆ, ಸಂತೋಷಕ್ಕೆ, ನೆಮ್ಮದಿಗೆ ತೃಪ್ತಿಗೆ ಬೇಕಾಗುವ ಬಹುದೊಡ್ಡ ಸಾಧನವೇ ಯೋಗವಿದ್ಯೆಯಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನಗರಸಭೆ ಗದಗ-ಬೆಟಗೇರಿ ಇವರುಗಳ ಸಂಯುಕ್ತಾಶ್ರಯದಲ್ಲಿ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಗುರುವಾರ ನಗರದ ಮುನ್ಸಿಪಲ್ ಆವರಣದಿಂದ ಹಮ್ಮಿಕೊಂಡಿದ್ದ ಸಾಮೂಹಿಕ ಯೋಗ ನಡಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಧಾನ ಪರಿಷತ್ ಸದಸ್ಯ




ಎಸ್.ವಿ. ಸಂಕನೂರ ಮಾತನಾಡಿ, ಜೀವ ಜಗತ್ತಿಗೆ ಭಾರತ ದೇಶವು ನೀಡಿದ ಅತ್ಯದ್ಭುತ ಕೊಡುಗೆ 'ಯೋಗ'ವಾಗಿದೆ. ಯೋಗವು ಪ್ರಾಚೀನ ಭಾರತೀಯ ತತ್ವಶಾಸ್ತ್ರವಾಗಿದ್ದು, ಸಾವಿರಾರು ವರ್ಷಗಳ ಇತಿಹಾಸ ಹೊಂದಿದೆ. ಯೋಗವು ಋಷಿಮುನಿಗಳ ಕೊಡುಗೆಯಾಗಿದೆ ಎಂದು ಹೇಳಿದರು.

ನಗರದ ಮುನ್ಸಿಪಲ್ ಕಾಲೇಜು ಆವರಣದಿಂದ ಸಾಮೂಹಿಕ ಯೋಗ ನಡಿಗೆಯಲ್ಲಿ ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ, ಉತ್ತಮ ಆರೋಗ್ಯಕ್ಕೆ ಸಂಜೀವಿನಿ ಯೋಗ, ಸದೃಡ ಆರೋಗಕ್ಕೆ ಯೋಗವೇ ರಾಮಬಾಣ, ಶರೀರ ಮತ್ತು ಮನಸ್ಸನ್ನು ಸದೃಡಗೊಳಿಸುವ ಏಕೈಕ ಸಾಧನ ಯೋಗ ಇತ್ಯಾದಿ ಘೋಷವಾಕ್ಯಗಳನ್ನು ಕೂಗುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತ ನಗರಸಭೆ ಕಾಲೇಜು ಮೈದಾನದಿಂದ ಗಾಂಧಿ ವೃತ್ತ, ಶಹಾಪುರ್ ಪೇಟೆ, ಮಹೇಂದ್ರಕರ ವೃತ್ತ, ಹುಯಿಲಗೋಳ ನಾರಾಯಣ ರಾವ್ ವೃತ್ತ, ರೋಟರಿ ವೃತ್ತ, ಗಾಂಧಿ ವೃತ್ತದ ಮೂಲಕ ನಗರಸಭೆ ಕಾಲೇಜು ಮೈದಾನದವರೆಗೆ ಜಾಗೃತಿಗಾಗಿ ಯೋಗ ನಡಿಗೆ ಮುಕ್ತಾಯಗೊಳಿಸಿದರು.

ಈ ಸಂದರ್ಭದಲ್ಲಿ ಜಿಲಾ ್ಲಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಆಯುಷ್ ಇಲಾಖೆಯ ಜಯಪಾಲಸಿಂಗ ಪಿ.ಸಮೋರೆಕರ, ತಾಲೂಕು ಗ್ಯಾರಂಟಿ ಯೋಜನೆಯ ತಾಲೂಕು ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯ ಕೃಷ್ಣಗೌಡ ಪಾಟೀಲ, ಯೋಗ ಪರಿಣಿತರು, ಡಿಜಿಎಮ್ ಆಯುರ್ವೇದಿಕ್ ಕಾಲೇಜು ವಿದ್ಯಾರ್ಥಿಗಳು, ರೋಣದ ಡಿ.ಜಿ.ಎಮ್ ಕಾಲೇಜಿನ ಬಿ.ಎ.ಎಮ್.ಎಸ್ ವಿದ್ಯಾರ್ಥಿಗಳು, ನಗರದ ವಿವಿಧ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ-ಕಾಲೇಜು ಪ್ರಾಧ್ಯಾಪಕರು ಪಾಲ್ಗೊಂಡಿದ್ದರು.

> 2015ರಿಂದ ಭಾರತ ಸರಕಾರವು ಯೋಗವನ್ನು ಇಡೀ ಜಗತ್ತಿಗೆ ಯೋಗ ದಿನಾಚರಣೆಯ ಮೂಲಕ ಪರಿಚಯಿಸಿದೆ. ಪತಂಜಲಿ ಮಹರ್ಷಿಗಳನ್ನು ಯೋಗದ ಪಿತಾಮಹ ಎಂದು ಪರಿಗಣಿಸಲಾಗುತ್ತದೆ. ಅವರು ಯೋಗ ಸೂತ್ರಗಳನ್ನು ರಚಿಸಿದರು. ಯೋಗದಿಂದ ಮನಸ್ಸಿನ ಕಲ್ಮಶಗಳನ್ನು, ಪದಗಳಿಂದ ಭಾಷೆಯ ದೋಷಗಳನ್ನು ಮತ್ತು ವೈದ್ಯಕೀಯದಿಂದ ಶರೀರದ ದೋಷಗಳನ್ನು ನಿವಾರಿಸಿದೆ ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

## ಸಂಪಾದಕೀಯ

# ಉದ್ಯೋಗ ಸೃಷ್ಟಿಯ ಭರವಸೆಗಳು ಮತ್ತು ಸವಾಲು

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಕುರಿತು ಪದೇ ಪದೇ ಶುಭ ಸುದ್ದಿ ನೀಡುತ್ತಿರುವುದು ಸ್ವಾಗತಾರ್ಹ ಬೆಳವಣಿಗೆ. ಹೆಸ್ಕಾಂ, ಸಾರಿಗೆ ಸಂಸ್ಥೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾವಿರಾರು ಹುದ್ದೆಗಳನ್ನು ಭರ್ತಿ ಮಾಡುವ ಭರವಸೆಗಳು ನಿರುದ್ಯೋಗಿ ಯುವಜನತೆಯಲ್ಲಿ ಆಶಾಭಾವನೆ ಮೂಡಿಸಿವೆ.

ಜೊತೆಗೆ, ಹೊರಗುತ್ತಿಗೆ ಆಧಾರದ ನೇಮಕಾತಿಗಳಲ್ಲೂ ಮೀಸಲಾತಿ ಜಾರಿಗೆ ತರುವ ನಿರ್ಧಾರವು ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಮಹತ್ವದ್ದಾಗಿದೆ. ಈ ಎಲ್ಲಾ ಭರವಸೆಗಳು ನಿಜಕ್ಕೂ ಶ್ಲಾಘನೀಯ. ಆದರೆ, ಕೇವಲ ಭರವಸೆಗಳು ಸಾಲದು. ಅವುಗಳನ್ನು ಸಕಾಲದಲ್ಲಿ ಕಾರ್ಯರೂಪಕ್ಕೆ ತರುವುದು ಅತ್ಯಂತ ಮುಖ್ಯ. ಕಳೆದ ಹಲವು ತಿಂಗಳಿಂದ ಈ ಬಗ್ಗೆ ಸಾಕಷ್ಟು ಘೋಷಣೆಗಳಾಗಿದ್ದರೂ, ವಾಸ್ತವದಲ್ಲಿ ನೇಮಕಾತಿ ಪ್ರಕ್ರಿಯೆಗಳು ನಿರೀಕ್ಷಿತ ವೇಗದಲ್ಲಿ ಸಾಗದಿರುವುದು ನಿರಾಶಾದಾಯಕ. ಅನೇಕ ನೇಮಕಾತಿಗಳು ವಿಳಂಬವಾಗುತ್ತಿವೆ, ಇನ್ನೂ ಕೆಲವು ಪ್ರಕ್ರಿಯೆಗಳು ಕಾನೂನು ತೊಡಕುಗಳಿಂದಾಗಿ ಸ್ಥಗಿತಗೊಂಡಿವೆ. ಇದು ನಿರುದ್ಯೋಗಿ ಯುವಕರನ್ನು ಕೇವಲ ಕಾಯುವಂತೆ ಮಾಡಿದೆ ಹೊರತು, ಅವರ ಭವಿಷ್ಯಕ್ಕೆ ಭದ್ರತೆ ಒದಗಿಸಿಲ್ಲ.

ರಾಜ್ಯದಲ್ಲಿ ನಿರುದ್ಯೋಗದ ಪ್ರಮಾಣ ಹೆಚ್ಚಾಗುತ್ತಲೇ ಇದೆ. ಲಕ್ಷಾಂತರ ಪದವೀಧರರು, ಡಿಪ್ಲೋಮಾ ಹೊಂದಿದವರು ಮತ್ತು ತಾಂತ್ರಿಕ ಶಿಕ್ಷಣ ಪಡೆದವರು ಉದ್ಯೋಗವಿಲ್ಲದೆ ಪರದಾಡುತ್ತಿದ್ದಾರೆ. ಸರ್ಕಾರಿ ಹುದ್ದೆಗಳು ಅವರಿಗೆ ಭದ್ರತೆ ಮತ್ತು ಗೌರವಯುತ ಜೀವನ ಒದಗಿಸುತ್ತವೆ ಎಂಬ ನಂಬಿಕೆಯಿದೆ. ಇಂತಹ ಸನ್ನಿವೇಶದಲ್ಲಿ, ಸರ್ಕಾರ ಕೇವಲ ಮಾತುಗಳಲ್ಲದೆ, ಕೃತಿಗಳ ಮೂಲಕವೂ ತಮ್ಮ ಬದ್ಧತೆಯನ್ನು ತೋರಿಸಬೇಕಿದೆ. ಸಮಯಕ್ಕೆ ಸರಿಯಾಗಿ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸುವುದು, ಪರೀಕ್ಷೆಗಳನ್ನು ನಡೆಸುವುದು, ಫಲಿತಾಂಶಗಳನ್ನು ಪ್ರಕಟಿಸುವುದು ಮತ್ತು ನೇಮಕಾತಿ ಆದೇಶಗಳನ್ನು ನೀಡುವುದು ಅತ್ಯಗತ್ಯ. ಈ ಪ್ರಕ್ರಿಯೆಯಲ್ಲಿನ ಯಾವುದೇ ವಿಳಂಬವು ಯುವಜನತೆಯ ಭವಿಷ್ಯದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಅಲ್ಲದೆ, ಹೊರಗುತ್ತಿಗೆ ನೇಮಕಾತಿಯಲ್ಲಿ ಮೀಸಲಾತಿ ಜಾರಿಯು ಶ್ಲಾಘನೀಯವಾಗಿದ್ದರೂ, ಅದು ಪಾರದರ್ಶಕ ಮತ್ತು ಪರಿಣಾಮಕಾರಿಯಾಗಿ ಜಾರಿಯಾಗುವಂತೆ ನೋಡಿಕೊಳ್ಳುವ ಜವಾಬ್ದಾರಿ ಸರ್ಕಾರದ ಮೇಲಿದೆ.

ಆರ್ಥಿಕ ಸವಾಲುಗಳ ನಡುವೆಯೂ, ಸರ್ಕಾರ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಬೇಕು. ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದರಿಂದ ಕೇವಲ ನಿರುದ್ಯೋಗ ಸಮಸ್ಯೆಗೆ ಪರಿಹಾರ ಸಿಗುವುದಲ್ಲದೆ, ಆಡಳಿತ ಯಂತ್ರವೂ ಸುಧಾರಿಸುತ್ತದೆ. ಸಿದ್ದರಾಮಯ್ಯನವರ ಭರವಸೆಗಳು ಕೇವಲ ಭರವಸೆಗಳಾಗಿಯೇ ಉಳಿಯದೆ, ನಿಜವಾದ 'ಗುಡ್ ನ್ಯೂಸ್' ಆಗಿ ಪರಿಣಮಿಸಲಿ ಎಂದು ಆಶಿಸೋಣ.

# ಕೈಬೀಸಿ ಕರೆಯುವ ಕಪ್ಪತ್ತಗುಡ್ಡ



ಈಗಾಗಲೇ ಮುಂಗಾರು ಮಳೆ ಆರಂಭವಾಗಿ ನಿರಂತರವಾಗಿ ಮಳೆ ಆಗುತ್ತಿರುವುದರಿಂದ ಗದಗ ಜಿಲ್ಲೆಯ ಕಪ್ಪತ್ತಗುಡ್ಡವು ಹಚ್ಚು ಹಸಿರಿನಿಂದ ಕಂಗೊಳಿಸುತ್ತಿದೆ. ಇದರಿಂದ ಯುವಕರು ದಿನ ನಿತ್ಯವೂ ಗುಂಪುಗುಂಪಾಗಿ ಸೇರಿಕೊಂಡು ಕಪ್ಪತ್ತಗುಡ್ಡವನ್ನು ನೋಡಲು ಟ್ರೆಕ್ಕಿಂಗ್‌ಗೆ ಬಂದು ಕಪ್ಪತ್ತಗುಡ್ಡದ ಪ್ರಕೃತಿಯ ಸೌಂದರ್ಯವನ್ನು ಆನಂದಿಸುತ್ತಿದ್ದಾರೆ.


ಇಂದಿನ ಯುವಕರಿಗೆ ಟ್ರೆಕ್ಕಿಂಗ್ ಎಂದರೆ ಎಲ್ಲೂ ಇಲ್ಲದ ಉತ್ಸಾಹ, ಹುಮ್ಮಸು. ಕಪ್ಪತ್ತಗುಡ್ಡದ ಪ್ರಕೃತಿಯ ಸೌಂದರ್ಯವನ್ನು ನೋಡಲು ದಿನ ನಿತ್ಯವೂ ನೂರಾರು ಯುವಕರು ಬರುತ್ತಿದ್ದು, ಕಪ್ಪತ್ತಗುಡ್ಡದ ಸೌಂದರ್ಯವನ್ನು ಸವಿದು ತಮ್ಮ ಮೊಬೈಲ್‌ನಲ್ಲಿ ಫೋಟೋಗಳನ್ನು ಕ್ಲಿಕ್ಕಿಸಿ ಸಾಮಾಜಿಕ ಜಾಲತಾಣಗಳಾದ ಫೇಸ್ಬುಕ್, ಇನ್ಸ್ಟಾಗ್ರಾಮ್‌ನಲ್ಲಿ ಅಪ್ಲೋಡ್ ಮಾಡುತ್ತಿದ್ದಾರೆ. ಕಪ್ಪತ್ತಗುಡ್ಡದ ಸೌಂದರ್ಯದ ಜೊತೆಗೆ ತೆಗೆದ ಫೋಟೋಗಳನ್ನು ತಮ್ಮ ವಾಟ್ಸಪ್‌ನಲ್ಲಿ ಸ್ಟೇಟಸ್ ಇಟ್ಟುಕೊಂಡು ಪ್ರಕೃತಿಯ ಸೌಂದರ್ಯದ ಬಗ್ಗೆ ನಾಲ್ಕೈದು ಸಾಲುಗಳನ್ನು ಬರೆದು ಹರಿಬಿಡುತ್ತಿದ್ದಾರೆ.

ಇದರಿಂದ ಕಪ್ಪತ್ತಗುಡ್ಡ ನೋಡಲು ಬೇರೆ ಬೇರೆ ಜಿಲ್ಲೆ, ತಾಲೂಕು ಅಂದರೆ ಹುಬ್ಬಳ್ಳಿ, ಹಾವೇರಿ, ಧಾರವಾಡ, ಶಿರಶಿ ಸೇರಿದಂತೆ ಅನೇಕ ಜಿಲ್ಲೆಗಳಿಂದ ಯುವಕರು ತಂಡ ಮಾಡಿಕೊಂಡು ಟ್ರೆಕ್ಕಿಂಗ್‌ಗೆ ಬರುತ್ತಿರುವ ದೃಶ್ಯಗಳು ಸಾಮಾನ್ಯವಾಗಿದೆ.

ಯುವಕರು ಟ್ರೆಕ್ಕಿಂಗ್ ಮಾಡಿ ಮನೋಹರವಾದ ಪ್ರಾಕೃತಿಕ ಸೊಬಗನ್ನು ಕಣ್ತುಂಬಿಕೊಳ್ಳುತ್ತಾ ಗುಡ್ಡಗಳನ್ನು ಹತ್ತುವ ಮತ್ತು ಓಡುವ ಚಟುವಟಿಕೆಗಳನ್ನು ಮಾಡುತ್ತಿದ್ದಾರೆ. ಗುಡ್ಡವನ್ನು ಹತ್ತಿ ಪ್ರಕೃತಿಯ ಸೌಂದರ್ಯ ಸವಿದು ತಮ್ಮ ಸಾಮಾಜಿಕ ಜಾಲತಾಣದಲ್ಲಿ ರೀಲ್ಸ್ ಮಾಡಿ ಅಪ್‌ಲೋಡ್ ಮಾಡುತ್ತಿದ್ದಾರೆ. ಕಪ್ಪತ್ತಗುಡ್ಡದ ಸೌಂದರ್ಯದಲ್ಲಿ ಅನೇಕ ರೀತಿಯ ರೀಲ್ಸ್ ಮಾಡಿಕೊಂಡು ತಮ್ಮ ಸಂತೋಷವನ್ನು ಯುವಕರು ಹಚ್ಚಿಕೊಳ್ಳುತ್ತಿದ್ದಾರೆ.

ಯುವಕರು ಟ್ರೆಕ್ಕಿಂಗ್ ಮಾಡಿ ಮನಸ್ಸಿನ ಪ್ರಶಾಂತತೆಯನ್ನು ಹೆಚ್ಚಿಸಿಕೊಳ್ಳುತ್ತಿದ್ದಾರೆ. ವರ್ಣಿಸಲಾರದ ಆನಂದವನ್ನೂ ಪಡೆಯುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಯುವಕರು ಖಿನ್ನತೆ, ಕಿರಿಕಿರಿಗಳನ್ನು ಅನುಭವಿಸುತ್ತಿದ್ದು, ಇದಕ್ಕೆ ಯಾವುದೇ ರೀತಿಯ ಔಷಧಿಗಳು, ಚಿಕಿತ್ಸೆ ಇಲ್ಲ. ಆದ್ದರಿಂದ ಯುವಕರು ಹೆಚ್ಚು ಹೆಚ್ಚು ಟ್ರೆಕ್ಕಿಂಗ್ ಮಾಡಬೇಕು. ಇದರಿಂದ ಯುವಕರು ತಮ್ಮ ಮನಸ್ಸನ್ನು ಪ್ರಶಾಂತವಾಗಿ ಇಟ್ಟುಕೊಳ್ಳಲು ಸಾಧ್ಯವಿದೆ.

ಒಟ್ಟಾರೆಯಾಗಿ ಯುವಕರ ಟ್ರೆಕ್ಕಿಂಗ್‌ನಿಂದ ಕಪ್ಪತ್ತಗುಡ್ಡಕ್ಕೆ ಇನ್ನಷ್ಟು ಕಳೆ ಬಂದಿದೆ. ಈ ಟ್ರೆಕ್ಕಿಂಗ್ ಮಾಡುವುದರಿಂದ ಹತ್ತಾರು ಲಾಭಗಳು ನಮಗೆ ಗೊತ್ತಿಲ್ಲದೇ ಪಡೆದುಕೊಳ್ಳಬಹುದು. ಒಟ್ಟಾರೆಯಾಗಿ ಯುವಕರು ಗುಂಪುಗುಂಪಾಗಿ ಟ್ರೆಕ್ಕಿಂಗ್ ಮಾಡುತ್ತಿರುವದರಿಂದ ತಮ್ಮ ಮನಸ್ಸಿಗೆ ಸಂತೋಷ ಹಾಗೂ ಉತ್ತಮವಾದ ಆಮ್ಲಜನಕ ಸೇವನೆ ಮಾಡಿ ಸಂತಸವನ್ನೂ ಅನುಭವಿಸುತ್ತಿದ್ದಾರೆ. ಹಾಗಾದರೆ ಇನ್ನೇಕೆ ತಡ, ನೀವೂ ಕಪ್ಪತ್ತಗುಡ್ಡಕ್ಕೆ ಭೇಟಿ ಕೊಟ್ಟು ಉತ್ತಮವಾದ ಪ್ರಕೃತಿಯ ಸೌಂದರ್ಯವನ್ನು ಸವಿದು ಎಂಜಾಯ್ ಮಾಡಿ. ಉತ್ತಮವಾದ ಆಮ್ಲಜನಕ ಸೇವನೆ ಮಾಡಿಕೊಂಡು ಚುರುಮುರಿಯನ್ನೂ ಸವಿದು ಮನೆಗೆ ಬನ್ನಿ...!



– ಸುರೇಶ ಎಸ್.ಲಮಾಣಿ.
ಛಾಯಾಗ್ರಾಹಕರು, ಲಕ್ಷ್ಮೇಶ್ವರ.

# ಇರಾನ್ ವಿರುದ್ಧ 'ಬಲಪ್ರಯೋಗ'ದ ಎಚ್ಚರಿಕೆ ನೀಡಿದ ಟ್ರಂಪ್: ಚೀನಾದಿಂದ ಪ್ರತ್ಯುತ್ತರ

■ ವಿಜಯಸಾಕ್ಷಿ ಸುದ್ದಿ, ಬೀಜಿಂಗ್

ಇಸ್ರೇಲ್ ಮತ್ತು ಇರಾನ್ ನಡುವೆ ಸಂಘರ್ಷವು ತೀವ್ರ ಸ್ವರೂಪ ಪಡೆಯುತ್ತಿದೆ. ಅಮೆರಿಕವು ಇರಾನ್ ವಿರುದ್ಧ 'ಬಲಪ್ರಯೋಗ'ದ ಹೇಳಿಕೆ ನೀಡಿದೆ. ಚೀನಾವು ಇದನ್ನು ಖಂಡಿಸಿ ಸ್ಪಷ್ಟ ಎಚ್ಚರಿಕೆ ನೀಡಿದೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಚೀನಾದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ಗುವೊ ಜಿಯಾಕುನ್ ಅವರು, ಅಮೆರಿಕದಿಂದ ಯಾವುದೇ ರೀತಿಯ ಬಲಪ್ರಯೋಗವು ಇರಾನ್‌ನ ಸಾರ್ವಭೌಮತೆ ಮತ್ತು ಭದ್ರತೆಯ ಉಲ್ಲಂಘನೆ ಎಂದು ಪರಿಗಣಿಸಲಾಗುವುದು ಎಂದು ತಿಳಿಸಿದರು.

ಚೀನಾವು ಇದನ್ನು ವಿರೋಧಿಸುತ್ತದೆ. ಜೊತೆಗೆ, ಅಂತರರಾಷ್ಟ್ರೀಯ ಸಂಬಂಧಗಳಲ್ಲಿ ಇಂತಹ ಯಾವುದೇ ಬಲಪ್ರಯೋಗದ ಬೆದರಿಕೆಯನ್ನು ಸಹ ನಾವು ವಿರೋಧಿಸುತ್ತೇವೆ ಎಂದು ಅವರು ವರದಿಗಾರರಿಗೆ ಸ್ಪಷ್ಟಪಡಿಸಿದರು.



ಈ ವಾರದ ಆರಂಭದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು, ಇರಾನ್ ವಿರುದ್ಧ ಇಸ್ರೇಲ್‌ನ ಮಿಲಿಟರಿ ದಾಳಿಗಳ ಬಗ್ಗೆ ಬೀಜಿಂಗ್ "ತೀವ್ರವಾಗಿ ಚಿಂತಿತವಾಗಿದೆ" ಎಂದು ಹೇಳಿಕೆ ನೀಡಿದ್ದರು. ಕಜಕಿಸ್ತಾನ್‌ನಲ್ಲಿ ಐದು ಮಧ್ಯ ಏಷ್ಯಾ ರಾಷ್ಟ್ರಗಳೊಂದಿಗೆ ನಡೆದ ಶೃಂಗಸಭೆಯ ಸಂದರ್ಭದಲ್ಲಿ ಮಾತನಾಡಿದ ಚೀನಾ ಅಧ್ಯಕ್ಷರು, ಇಸ್ರೇಲ್ ಮತ್ತು ಇರಾನ್‌ಗಳಿಗೆ ಸಂಘರ್ಷವನ್ನು ಕೊನೆಗೊಳಿಸಲು ಕರೆ ನೀಡಿದರು. ಕ್ಸಿ ಜಿನ್‌ಪಿಂಗ್ ಅವರು "ಎಲ್ಲಾ ಪಕ್ಷಗಳು ಆದಷ್ಟು ಬೇಗ ಸಂಘರ್ಷವನ್ನು ಕಡಿಮೆ ಮಾಡಲು ಮತ್ತು ಪರಿಸ್ಥಿತಿ ಇನ್ನಷ್ಟು ಹದಗೆಡುವುದನ್ನು ತಡೆಯಲು ಶ್ರಮಿಸಬೇಕು" ಎಂದು ಹೇಳಿರುವುದಾಗಿ ಚೀನಾದ ಸರ್ಕಾರಿ ಪ್ರಸಾರಕ ಸಿಜಿಟಿಎನ್ ವರದಿ ಮಾಡಿದೆ.

ಚೀನಾವು ಎಲ್ಲಾ ಸಂಬಂಧಿತ ಪಕ್ಷಗಳಿಗೆ, ವಿಶೇಷವಾಗಿ ಇಸ್ರೇಲ್ ಮೇಲೆ ವಿಶೇಷ ಪ್ರಭಾವ ಹೊಂದಿರುವ ದೇಶಗಳಿಗೆ, ತಮ್ಮ ಜವಾಬ್ದಾರಿಗಳನ್ನು ಹೊರಲು, ಉದ್ವಿಗ್ನ ಪರಿಸ್ಥಿತಿಯನ್ನು ತಣ್ಣಗಾಗಿಸಲು ಮತ್ತು ಸಂಘರ್ಷವು ಉಲ್ಬಣಗೊಳ್ಳುವುದನ್ನು ಹಾಗೂ ಹರಡುವುದನ್ನು ತಡೆಯಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕರೆ ನೀಡುತ್ತದೆ" ಎಂದು ಗುವೊ ಮತ್ತೊಂದು ಪತ್ರಿಕಾಗೋಷ್ಠಿಯಲ್ಲಿ ಯಾವುದೇ ದೇಶಗಳನ್ನು ನೇರವಾಗಿ ಹೆಸರಿಸದೆ ಹೇಳಿದರು.

# ಅಮೆರಿಕದಿಂದ ಇರಾನ್ ನಾಯಕರ ಹತ್ಯೆ ಬೆದರಿಕೆ ಖಂಡನೀಯ: ಸಿಪಿಎಂ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಅಮೆರಿಕ ಮತ್ತು ಜಿ7 ರಾಷ್ಟ್ರಗಳು ಇರಾನ್ ವಿರುದ್ಧ ಅನುಸರಿಸುತ್ತಿರುವ ಆಕ್ರಮಣಕಾರಿ ಧೋರಣೆಯನ್ನು ಸಿಪಿಐ(ಎಂ) ಪಾಲಿಟ್‌ಬ್ಯೂರೋ ತೀವ್ರವಾಗಿ ಖಂಡಿಸಿದೆ. ಈ ಕ್ರಮಗಳು ಅಂತರರಾಷ್ಟ್ರೀಯ ಶಾಂತಿಗೆ ಅಪಾಯ ತಂದೊಡ್ಡುತ್ತವೆ ಎಂದು ಪಕ್ಷ ಸ್ಪಷ್ಟಪಡಿಸಿದೆ.

ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ಹೇಳಿಕೆಗಳನ್ನು "ಆಕ್ರಮಣಕಾರಿ" ಎಂದು ಸಿಪಿಎಂ ಬಣ್ಣಿಸಿದ್ದು, ಇರಾನ್ ನಾಯಕರನ್ನು "ಸಾರ್ವಜನಿಕವಾಗಿ ಹತ್ಯೆ ಮಾಡುವ ಬೆದರಿಕೆ" ಹಾಕಿರುವುದು ಅತ್ಯಂತ ಖಂಡನೀಯ ಎಂದು ಹೇಳಿದೆ. ಕೆನಡಾದಲ್ಲಿ ನಡೆದ ಜಿ7 ರಾಷ್ಟ್ರಗಳ ಶೃಂಗಸಭೆಯ ಜಂಟಿ ಹೇಳಿಕೆಯು ಇಸ್ರೇಲ್‌ನ ಆಕ್ರಮಣಕಾರಿ ಕೃತ್ಯಗಳನ್ನು ನಿರ್ಲಕ್ಷಿಸಿ, ಇರಾನ್‌ನನ್ನೇ ದೂಷಿಸುತ್ತಿದೆ ಎಂದು ಎಡಪಕ್ಷ ತೀವ್ರವಾಗಿ ಟೀಕಿಸಿದೆ. ಟ್ರಂಪ್ ಅವರು ನೀಡುತ್ತಿರುವ ಪ್ರಚೋದನಕಾರಿ ಹೇಳಿಕೆಗಳು ಇಡೀ ಪಶ್ಚಿಮ ಏಷ್ಯಾ ಪ್ರದೇಶವನ್ನು ಯುದ್ಧ ಮತ್ತು ಅಸ್ಥಿರತೆಗೆ ತಳ್ಳುವ ಅಪಾಯವನ್ನುಂಟುಮಾಡುತ್ತಿವೆ ಎಂದು ಹೇಳಿಕೆ ಆರೋಪಿಸಿದೆ.



ಇರಾನ್ ಬೇಷರತ್ ಶರಣಾಗತಿಯಾಗಬೇಕೆಂದು ಟ್ರಂಪ್ ಬೆದರಿಕೆ ಹಾಕುತ್ತಿರುವುದು ಅತ್ಯಂತ ಖಂಡನೀಯ. ಅಮೆರಿಕದ ಸೇನಾ ನೌಕಾಪಡೆಗಳನ್ನು ಬೃಹತ್ತಾಗಿ ಸಜ್ಜುಗೊಳಿಸುತ್ತಿರುವುದು ಇಸ್ರೇಲ್‌ನೊಂದಿಗೆ ಸೇರಿಕೊಂಡು ಇರಾನ್ ಮೇಲೆ ನೇರ ದಾಳಿಗಳನ್ನು ಪ್ರಾರಂಭಿಸುವ ಸಿದ್ಧತೆಯನ್ನು ಸೂಚಿಸುತ್ತದೆ. ಈ ಬೆಳವಣಿಗೆಗಳು ಅತ್ಯಂತ ಅಪಾಯಕಾರಿ ಎಂದು ಸಿಪಿಎಂ ಹೇಳಿಕೆ ವಿವರಿಸಿದೆ. ಅಮೆರಿಕ ಮತ್ತು ಪಾಶ್ಚಿಮಾತ್ಯ ಸಾಮ್ರಾಜ್ಯಶಾಹಿಗಳು ಅಂತರರಾಷ್ಟ್ರೀಯ ಕಾನೂನುಗಳು ಮತ್ತು ಒಪ್ಪಂದಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಿ, ಪಶ್ಚಿಮ ಏಷ್ಯಾದಲ್ಲಿ ತಮ್ಮ ಪ್ರಾಬಲ್ಯ ಸಾಧಿಸಲು ಇಸ್ರೇಲ್ ಅನ್ನು ಒಂದು ಏಜೆಂಟ್ ಆಗಿ ಬಳಸಿಕೊಳ್ಳುತ್ತಿವೆ ಎಂದು ಸಿಪಿಐ(ಎಂ) ಪ್ರತಿಪಾದಿಸಿದೆ.

# ಉಮದಿ ಗ್ರಾಮದಲ್ಲಿ ಶ್ರೀ ರೇಣುಕಾಚಾರ್ಯ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಜತ್ತ

ಜತ್ತ ತಾಲೂಕಿನ ಉಮದಿ ಶ್ರೀ ರಂಭಾಪುರಿ ಶಾಖಾ ಮಠ ಮಹಾಸಂಸ್ಥಾನ ಹಿರೇಮಠದಲ್ಲಿ ಜೂನ್ 20ರಂದು ಸಂಜೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ ಸಾನ್ನಿಧ್ಯದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮ ಜರುಗಲಿದೆ.




ಸಮಾರಂಭದಲ್ಲಿ ಬೆಳ್ಳಂಕಿ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳು, ಆಲಮೇಲ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ತಡವಲಗಾ ಅಭಿನವ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಜಗಜೇವಣಿ ಮುಪ್ಪಿನಾರ್ಯ ಶಿವಾಚಾರ್ಯ ಸ್ವಾಮಿಗಳು ಹಾಗೂ ಗುಡ್ಡಾಪುರದ ಗುರಪಾದೇಶ್ವರ ಶಿವಾಚಾರ್ಯ ಸ್ವಾಮಿಗಳು, ವೇ.ಬಸವರಾಜ ಸ್ವಾಮಿಗಳು ಪಾಲ್ಗೊಳ್ಳುವರು.

ಹಲವಾರು ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಸಮಾರಂಭದಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ಮಠದ ಪ್ರಕಟಣೆ ತಿಳಿಸಿದೆ.


# ಟೈಯರ್ ಬ್ಲಾಸ್ಟ್.. ಡಿವೈಡರ್ ಗೆ ಡಿಕ್ಕಿ ಹೊಡೆದು ಕಾರು ಪಲ್ಟಿ: ಇಬ್ಬರಿಗೆ ಗಾಯ – ಭೀಕರ ಅಪಘಾತದ ದೃಶ್ಯ CCTVಯಲ್ಲಿ ಸೆರೆ

■ ವಿಜಯಸಾಕ್ಷಿ ಸುದ್ದಿ, ತುಮಕೂರು

ಕಾರಿನ ಟೈಯರ್ ಬ್ಲಾಸ್ಟ್ ಆದ ಪರಿಣಾಮ ಭೀಕರ ಅಪಘಾತ ಸಂಭವಿಸಿ ಕಾರಿನಲ್ಲಿದ್ದ ಇಬ್ಬರಿಗೆ ಗಂಭೀರ ಗಾಯಗಳಾಗಿರುವ ಘಟನೆ ತುಮಕೂರು ಜಿಲ್ಲೆ ಪಾವಗಡ ಪಟ್ಟಣದ ಎಂ.ಜಿ ಸರ್ಕಲ್ ನಲ್ಲಿ ತಡರಾತ್ರಿ 12 ಗಂಟೆ ಸುಮಾರಿಗೆ ನಡೆದಿದೆ. ಮಾರುತಿ ಸುಜುಕಿ ಬೊಲೆನೋ ಕಾರಿನಲ್ಲಿ ಬರುತ್ತಿದ್ದ ವೇಳೆ ಕಾರಿನ ಟೈಯರ್ ಬ್ಲಾಸ್ಟ್ ಆಗಿ ಚಾಲಕನ ನಿಯಂತ್ರಣ ತಪ್ಪಿದ್ದಲ್ಲದೆ ಕಾರು ಡಿವೈಡರ್ ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಈ ವೇಳೆ ಕಾರಿನಲ್ಲಿದ್ದ ನಾಗಮೋಹನ ರೆಡ್ಡಿ ಹಾಗೂ ಮತ್ತೊಬ್ಬನಿಗೆ ಗಂಭೀರ ಗಾಯಗಳಾಗಿದ್ದು, ಪಾವಗಡ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿತ್ತು. ಆದ್ರೆ ಹೆಚ್ಚಿನ ಚಿಕಿತ್ಸೆಗಾಗಿ ತುಮಕೂರು ಜಿಲ್ಲಾಸ್ಪತ್ರೆಗೆ ರವಾನೆ ಮಾಡಲಾಗಿದೆ. ಇನ್ನೂ ಭೀಕರ ಅಪಘಾತದ ದೃಶ್ಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಪಾವಗಡ ಪೊಲೀಸರು ಸ್ಥಳಕ್ಕೆ ಭೇಟಿ, ಪರಿಶೀಲನೆ ನಡೆಸಿದ್ದಾರೆ. ಘಟನೆ ಸಂಬಂಧ ಪಾವಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.



# ಟ್ರಂಪ್, ಪಾಕ್ ಸೇನಾ ಮುಖ್ಯಸ್ಥನ ಭೋಜನ ಕೂಟ ಆಲಿಂಗನಕ್ಕೆ ಹೊಡೆತ ಎಂದ ಕಾಂಗ್ರೆಸ್



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭೋಜನ ಕೂಟ ನೀಡಿದ ನಂತರ ಕಾಂಗ್ರೆಸ್ ಗುರುವಾರ ಕೇಂದ್ರ ಸರ್ಕಾರದ ಮೇಲೆ ದಾಳಿ ನಡೆಸಿದ್ದು, ಇದು ಭಾರತೀಯ ರಾಜತಾಂತ್ರಿಕತೆಗೆ "ದೊಡ್ಡ ಹೊಡೆತ" ಎಂದು ಹೇಳಿದೆ. "ಇದು ಭಾರತೀಯ ರಾಜತಾಂತ್ರಿಕತೆಗೆ (ಮತ್ತು ಆಲಿಂಗನ ರಾಜತಾಂತ್ರಿಕತೆಗೂ) ದೊಡ್ಡ ಹೊಡೆತವಾಗಿದೆ" ಎಂದು ಕಾಂಗ್ರೆಸ್ ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸಿದೆ.

ಟ್ರಂಪ್ & ಪಾಕ್ ಸೇನಾ

ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅವರು ಪಾಕಿಸ್ತಾನ ಮುಖ್ಯಸ್ಥನೂ ಅಥವಾ ಸರ್ಕಾರದ ಮುಖ್ಯಸ್ಥನೂ ಅಲ್ಲ. ಬದಲಾಗಿ ಅವರು ಪಾಕಿಸ್ತಾನದ ಸೇನಾ ಮುಖ್ಯಸ್ಥರಾಗಿದ್ದು, ಆದರೆ ಅವರನ್ನೆ ಟ್ರಂಪ್ ಊಟಕ್ಕೆ ಆಹ್ವಾನಿಸುತ್ತಾರೆ ಮತ್ತು ಹೆಚ್ಚಿನ ಪ್ರಶಂಸೆಯನ್ನು ಮಾಡುತ್ತಾರೆ ಎಂದು ಕಾಂಗ್ರೆಸ್ ಸಂವಹನ ವಿಭಾಗದ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

ಸೈನ್ಯದ ಉಪಕರಣದಿಂದ ಈ ದಾಳಿ ಸಂಭವಿಸಿತ್ತು" ಎಂದು ರಮೇಶ್ ಅವರು ಪೋಸ್ಟ್‌ನಲ್ಲಿ ಬರೆದಿದ್ದಾರೆ. ಟ್ರಂಪ್ ಮತ್ತು ಅವರ ಭೇಟಿಯು ಇದು ಭಾರತೀಯ ರಾಜತಾಂತ್ರಿಕತೆಗೆ (ಮತ್ತು ಆಲಿಂಗನ ರಾಜತಾಂತ್ರಿಕತೆಗೂ) ದೊಡ್ಡ ಹೊಡೆತವಾಗಿದೆ ಎಂದು ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ರಮೇಶ್ ಅವರು ಟೀಕಿಸಿದ್ದಾರೆ.

"ಆಲಿಂಗನ ರಾಜತಾಂತ್ರಿಕತೆ" ಪದವನ್ನು ಬಳಸಿ ಕಾಂಗ್ರೆಸ್ ಪಕ್ಷವೂ ಪ್ರಧಾನಿ ಮೋದಿ ಅವರನ್ನು ನೇರವಾಗಿ ಟೀಕಿಸುತ್ತಿದೆ. ಅಂತರರಾಷ್ಟ್ರೀಯ ಅಥವಾ ದ್ವಿಪಕ್ಷೀಯ ಕಾರ್ಯಕ್ರಮಗಳಲ್ಲಿ ವಿದೇಶಿ ರಾಷ್ಟ್ರಗಳ ಮುಖ್ಯಸ್ಥರೊಂದಿಗೆ ನಡೆಯುವ ಅವರ ಸಭೆಗಳಲ್ಲಿ ಪ್ರಧಾನಿ ಮೋದಿ ಹೆಚ್ಚಾಗಿ "ಆಲಿಂಗನ" ಮಾಡುತ್ತಾರೆ. ಹಾಗಾಗಿ ಕಾಂಗ್ರೆಸ್ "ಆಲಿಂಗನ ರಾಜ–ತಾಂತ್ರಿಕತೆ" ಎಂಬ ಪದವನ್ನು ಬಳಸುತ್ತಿದೆ.

ಈ ಮಧ್ಯೆ, ಭಾರತ ಮತ್ತು ಪಾಕಿಸ್ತಾನದ ಇಬ್ಬರು "ಅತ್ಯಂತ ಬುದ್ಧಿವಂತ" ನಾಯಕರು ವಾರಗಳ ಹಿಂದೆ ಪರಮಾಣು ಯುದ್ಧವನ್ನು ಮುಂದುವರಿಸದಿರಲು "ನಿರ್ಧರಿಸಿದ್ದಾರೆ" ಎಂದು ಟ್ರಂಪ್ ಹೇಳಿದ್ದಾರೆ. ಅದಾಗ್ಯೂ, ಎರಡು ನೆರೆಯ ರಾಷ್ಟ್ರಗಳ ನಡುವಿನ ಯುದ್ಧವನ್ನು ನಿಲ್ಲಿಸಿದ ಕೀರ್ತಿಯನ್ನು ಅವರು ಈ ಬಾರಿ ಹೇಳಿಕೊಳ್ಳಲಿಲ್ಲ. ಬುಧವಾರ ಶ್ವೇತಭವನದಲ್ಲಿ ಮುನೀರ್ ಅವರನ್ನು ಊಟಕ್ಕೆ ಆತಿಥ್ಯ ವಹಿಸಿದ ನಂತರ ಓವಲ್ ಕಚೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡುತ್ತಾ ಟ್ರಂಪ್ ಈ ಹೇಳಿಕೆಗಳನ್ನು ನೀಡಿದ್ದಾರೆ. ಮುನೀರ್ ಅವರನ್ನು ಭೇಟಿಯಾಗುವ ಗೌರವ ತನಗೆ ಸಿಕ್ಕಿದೆ ಎಂದು ಟ್ರಂಪ್ ಹೇಳಿದ್ದಾರೆ.

### ಉಚ್ಚಂಗಿದುರ್ಗದಲ್ಲಿ ನಡೆದ ಎಐಟಿಯುಸಿ ನಾಲ್ಕನೇ ತಾಲ್ಲೂಕು ಸಮ್ಮೇಳನದಲ್ಲಿ ಮುಖಂಡ ಉಮೇಶ್ ಅಭಿಮತ

# ದುಡಿಯುವ ಸಮುದಾಯಕ್ಕೆ ಭದ್ರತೆ ಒದಗಿಸಿದ್ದು ಕಾರ್ಮಿಕ ಸಂಘಟನೆ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ದುಡಿಯುವ ಶ್ರಮಿಕ ವರ್ಗ ಎಲ್ಲಿಯವರೆಗೂ ಅಸಂಘಟಿತರಾಗಿರುತ್ತಾರೋ ಅಲ್ಲಿಯವರೆಗೂ, ಮಾಲೀಕರ ಹಾಗೂ ಏಜೆಂಟರಿಂದ ಶೋಷಣೆ ಅನುಭವಿಸಬೇಕಾಗುತ್ತದೆ. ಹೀಗಾಗಿ, ಸಾಂಘಿಕ ಹೋರಾಟಕ್ಕೆ ಧುಮುಕುವ ಮೂಲಕ ಶೋಷಣೆ ಸಂಕೋಲೆಯಿಂದ ಹೊರಬರಬೇಕಾಗಿದೆ ಎಂದು ಅಲ್ ಇಂಡಿಯಾ ಟ್ರೇಡ್ ಇಂಡಿಯಾ ಕಾಂಗ್ರೆಸ್ (ಎಐಟಿಯುಸಿ) ಸಂಘಟನೆಯ ರಾಜ್ಯ ಘಟಕದ ಅಧ್ಯಕ್ಷ ಎಚ್.ಜಿ. ಉಮೇಶ್ ಕರೆ ನೀಡಿದರು.

ತಾಲ್ಲೂಕಿನ ಉಚ್ಚಂಗಿದುರ್ಗ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಸಂಘಟನೆಯ ನಾಲ್ಕನೇ ತಾಲೂಕು ಘಟಕದ ಸಮ್ಮೇಳನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದ ಎಐಟಿಯುಸಿ ಕಾರ್ಮಿಕ ಸಂಘಟನೆಯ ಬಲವರ್ಧನೆಯಲ್ಲಿ ಹರಪನಹಳ್ಳಿ ತಾಲ್ಲೂಕಿನ ಅರಸೀಕೆರೆ ಹಾಗೂ ಉಚ್ಚಂಗಿದುರ್ಗ ಭಾಗದ ಕಟ್ಟಡ ಕಾರ್ಮಿಕರ ಬಲ ಅತ್ಯಂತ ಪ್ರಮುಖವಾಗಿದೆ. ತೊಂಭತ್ತರ ದಶಕದ ಕೊನೆಯವರೆಗೂ, ದುಡಿಯುವ ವರ್ಗದ ಶ್ರಮಿಕರಿಗೆ ಯಾವುದೇ ಭದ್ರತೆಗಳೇ ಇರಲಿಲ್ಲ. ಇಡೀ ತಮ್ಮ ಜೀವಿತದ ಅವಧಿಯುದ್ದಕ್ಕೂ ಮಾಲೀಕರು ಹಾಗೂ ಕಂಪೆನಿಗಳು ಕಾರ್ಮಿಕ ಸಮುದಾಯವನ್ನು ಪುಡಿಗಾಸಿನ ಕೂಲಿಗಾಗಿ ದುಡಿಸಿಕೊಳ್ಳುವ ಮೂಲಕ ತಾವೂ ಮಾತ್ರ ಐಷಾರಾಮಿ ಬದುಕು ಕಟ್ಟಿಕೊಂಡಿದ್ದರು. ಆದರೆ, ಕಾರ್ಮಿಕರು, ದಿನವಿಡೀ ದುಡಿದರೂ, ಕುಟುಂಬಗಳನ್ನು ಪೋಷಿಸಲು ಸಾಕಾಗುತ್ತಿರಲ್ಲ. ಜತೆಗೆ, ಜ್ವರ, ಕಾಯಿಲೆಗಳು ಸೇರಿಕೊಂಡರೂ, ಧನಿಕರ ಬಳಿ, ಸಾಲಸೋಲ ಮಾಡಿ, ಆರೈಕೆ ಮಾಡಿಕೊಳ್ಳಬೇಕಾಗಿತ್ತು. ಮಕ್ಕಳ ಮದುವೆ, ಮುಂಜಿ ಸೇರಿದಂತೆ ದುಡಿದ ಹಣ ಯಾವುದಕ್ಕೂ ಸಾಲುತ್ತಿರಲಿಲ್ಲ. ಇವೆಲ್ಲವುಗಳಿಗೂ ಮಾಡಿದ ಸಾಲ ತೀರಿಸಲು ಇಡೀ ಜೀವಿತಾವಧಿಯವರೆಗೂ ಜೀವ ಸವೆಸಬೇಕಾಗಿತ್ತು. ಆದರೆ, ಎಐಟಿಯುಸಿ ಅಸಂಘಟಿತ ಕಾರ್ಮಿಕರನ್ನು ಸಂಘಟಿಸುವ ಮೂಲಕ ಹೋರಾಟ ರೂಪಿಸಿ, ಕಾರ್ಮಿಕರ ಹಕ್ಕುಗಳ ಕುರಿತು ಚಳವಳಿ ನಡೆಸುವ ಮೂಲಕ ಕಾರ್ಮಿಕರ ಬದುಕಿಗೆ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಕಾರ್ಮಿಕ ಮಂಡಳಿ ರಚನೆಯಾಯಿತು ಎಂದು ಉಮೇಶ್ ವಿವರಿಸಿದರು.

ಸಂಘಟನೆಯ ತಾಲೂಕು ಘಟಕದ ಕಾರ್ಯದರ್ಶಿ ಗುಡಿಹಳ್ಳಿ ಹಾಲೇಶ್ ಮಾತನಾಡಿ, ಸಂಘಟನೆಯ ಹೋರಾಟದ ಫಲವಾಗಿ, ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ರಚನೆಯಾಗಿದೆ. ಆದರೆ, ಮಂಡಳಿ ಆರೋಗ್ಯ ತಪಾಸಣೆ ಹೆಸರಿನಲ್ಲಿ ಹಾಗೂ ಕಿಟ್ ವಿತರಣೆ ಹೆಸರಿನಲ್ಲಿ ಸಾವಿರಾರು ಕೋಟಿ ಹಣವನ್ನು ದೋಚುವ ಕೆಲಸಕ್ಕೆ ಮಾಡುತ್ತಿದೆ. ಈ ಕೋಟ್ಯಂತರ ರೂಪಾಯಿ ಹಣ ಕಾರ್ಮಿಕರ ಬೆವರುಬಸಿದು ದುಡಿದ ಹಣ. ಅದು ಸೆಸ್ ರೂಪದಲ್ಲಿ ಕಲ್ಯಾಣ ಮಂಡಳಿ ಖಜಾನೆ ತುಂಬಿದೆ. ಶ್ರಮಿಕ ವರ್ಗದ ಬೆವರಿನ ಹಣವನ್ನೂ ಕೊಳುಬಾಕರು ಕಬಳಿಸಲು ಮುಂದಾಗಿರುವುದು ನಾಚಿಕೆಗೇಡಿ ಸಂಗತಿ. ಹೀಗಾಗಿ, ಶ್ರಮಿಕ ಸಮುದಾಯ ಮುಂದಿನ ದಿನಗಳಲ್ಲಿ ಇನ್ನೂ ಬಲಿಷ್ಠರಾಗಿ ಸಂಘಟಿತರಾಗುವ ಮೂಲಕ ಸಂವಿಧಾನಬದ್ಧ ಹಕ್ಕುಗಳನ್ನು ಪಡೆಯಲು ಮುಂದಾಗಬೇಕಿದೆ ಎಂದು ಕರೆ ನೀಡಿದರು.

> ಇಡೀ ತಮ್ಮ ಜೀವಿತದ ಅವಧಿಯುದ್ದಕ್ಕೂ ಮಾಲೀಕರು ಹಾಗೂ ಕಂಪೆನಿಗಳು ಕಾರ್ಮಿಕ ಸಮುದಾಯವನ್ನು ಪುಡಿಗಾಸಿನ ಕೂಲಿಗಾಗಿ ದುಡಿಸಿಕೊಳ್ಳುವ ಮೂಲಕ ತಾವೂ ಮಾತ್ರ ಐಷಾರಾಮಿ ಬದುಕು ಕಟ್ಟಿಕೊಂಡಿದ್ದರು. ಆದರೆ, ಕಾರ್ಮಿಕರು, ದಿನವಿಡೀ ದುಡಿದರೂ, ಕುಟುಂಬಗಳನ್ನು ಪೋಷಿಸಲು ಸಾಕಾಗುತ್ತಿರಲ್ಲ. ಇಂಥಹ ಶೋಷಣೆಗೆ ಅಂತ್ಯ ಹಾಡಿದ್ದು ಎಐಟಿಯುಸಿ ಸಂಯೋಜಿತ ಕಾರ್ಮಿಕ ಸಂಘಟನೆ.
> –ಎಚ್.ಜಿ. ಉಮೇಶ್, ರಾಜ್ಯಘಟಕದ ಅಧ್ಯಕ್ಷರು, ಎಐಟಿಯುಸಿ ಸಂಘಟನೆ.

> ಸುಭದ್ರ ದೇಶ ನಿರ್ಮಾಣದಲ್ಲಿ ಕಾರ್ಮಿಕರ ಬೆವರಿನ ಹನಿಯ ಪಾಲಿದೆ. ದೇಶದ ಆರ್ಥಿಕ ವ್ಯವಸ್ಥೆಯ ಬಲಿಷ್ಠಗೊಳಿಸುವಿಕೆಯಲ್ಲಿ ನಮ್ಮ ಶ್ರಮಿಕ ಸಮುದಾಯದ ಪಾಲು ಅಗ್ರಗಣ್ಯವಾಗಿದೆ. ಹೀಗಾಗಿ, ನಾವು ಕೇವಲ ಕಟ್ಟಡ ಕಾರ್ಮಿಕರು ಮಾತ್ರ ಅಲ್ಲ, ದೇಶವನ್ನೇ ಕಟ್ಟುವ ಜನ ನಾವು. ಸುಭದ್ರ ದೇಶ ನಿರ್ಮಾಣದಲ್ಲಿ ಕಾರ್ಮಿಕರ ಬೆವರಿನ ಹನಿಯ ಪಾಲೂ ಸೇರಿದೆ. ಹೀಗಾಗಿ, ನಮ್ಮಲ್ಲಿರುವ ಭಿನ್ನತೆಯನ್ನು ಬದಿಗಿರಿಸಿ, ಏಕತೆಯನ್ನು ಸಾಧಿಸುವ ಮೂಲಕ ನಮ್ಮ ಮೂಲಭೂತ ಹಕ್ಕುಗಳು ಹಾಗೂ ಸೌಕರ್ಯಗಳನ್ನು ಪಡೆಯಲು ಮುಂದಾಗಬೇಕಾದ ಅನಿವಾರ್ಯತೆ ಇದೆ ಎಂದು ಸಂಘಟನೆಯ ತಾಲೂಕು ಉಸ್ತುವಾರಿ ಎಚ್.ಎಂ. ಸಂತೋಷ್ ಕಾರ್ಮಿಕರಿಗೆ ಕಿವಿಮಾತು ಹೇಳಿದರು.

ಸಂಘಟನೆಯ ಹಿರಿಯ ಮುಖಂಡ ಹೊಸಳ್ಳಿ ಮಲ್ಲೇಶ್, ಕಲ್ಲು ಹೊಡೆಯುವ ಮತ್ತು ಕ್ವಾರಿ ಕಾರ್ಮಿಕರ ಸಂಘಟನೆಯ ತಾಲೂಕು ಅಧ್ಯಕ್ಷ ಕೆ. ದಾದಾಪೀರ್, ರಾಜ್ಯ ಕಾರ್ಯದರ್ಶಿ ಎಚ್. ವೀರಣ್ಣ, ರಾಜ್ಯ ಮಂಡಳಿ ಸದಸ್ಯ ಹಲಗಿ ಸುರೇಶ್, ಸಂಘಟನೆಯ ತಾಲೂಕು ಕಾರ್ಯದರ್ಶಿ ಬಳಿಗಾನೂರು ಕೊಟ್ರೇಶ್, ಹಿರಿಯ ಕಾರ್ಮಿಕರಾದ ಟಿ. ರಾಮಜ್ಜ, ಅರಸೀಕೆರೆ ರಂಗಪ್ಪ, ಚಿತ್ರದುರ್ಗದ ಚೌಡಪ್ಪ, ಹಾಲೇಶಪ್ಪ ಸತ್ತೂರು, ಚಕಣಾಚಾರಿ, ಅಂಗನವಾಡಿ ಶಿಕ್ಷಕಿ ಬಸಮ್ಮ ಸೇರಿದಂತೆ ಕಟ್ಟಡ ಕಾರ್ಮಿಕರು, ಕಲ್ಲು ಒಡೆಯುವ ಕಾರ್ಮಿಕರು ಹಾಗೂ ಕ್ವಾರಿ ಕಾರ್ಮಿಕರು ಸೇರಿದಂತೆ ವಿವಿಧ ಕಾರ್ಮಿಕರು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದರು.

ಸಮ್ಮೇಳನಕ್ಕೂ ಮುನ್ನ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಕೋಟೆ ಕ್ಯಾಂಪ್ ವರೆಗೂ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಮಿಕರು ಮತ್ತು ಮುಖಂಡರು ಬೈಕ್ ರ್‍ಯಾಲಿ ನಡೆಸಿದರು. ರ್‍ಯಾಲಿಗೆ ಹಿರಿಯ ಮುಖಂಡ ಹೊಸಳ್ಳಿ ಮಲ್ಲೇಶ್ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಸಂಘಟನೆಯ ಮುಂದಿನ ಮೂರು ವರ್ಷದ ಅವಧಿಯ ಪದಾಧಿಕಾರಿಗಳ ಆಯ್ಕೆ ಸಹ ಮಾಡಲಾಯಿತು.

# ನೀಟ್ ಕೌನ್ಸಿಲಿಂಗ್ ಪೂರ್ವ ತಯಾರಿ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡದ ವಿದ್ಯಾಪೋಷಕ ಸಂಸ್ಥೆಯ ವತಿಯಿಂದ 2025-26ನೇ ಶೈಕ್ಷಣಿಕ ಸಾಲಿನಲ್ಲಿ ವೈದ್ಯಕೀಯ ವಿಭಾಗ-ಕ್ಕೆ ಪ್ರವೇಶ ಪಡೆಯುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತ ನೀಟ್ ಕೌನ್ಸಿಲಿಂಗ್ ಪೂರ್ವ ತಯಾರಿ ಬಗ್ಗೆ ಜೂ. 26ರಂದು ಮಧ್ಯಾಹ್ನ 12 ಗಂಟೆಗೆ ಆನ್‌ಲೈನ್ ಮೂಲಕ ಕಾರ್ಯಾಗಾರವನ್ನು ಆಯೋಜಿಸಿದೆ.

ಈ ಕಾರ್ಯಾಗಾರಕ್ಕೆ ಡಾ. ವರುಣ್ ಶೆಟ್ಟಿ, Dept. of Pedodontics, BDS, MDS, ಎಸ್.ಡಿ.ಎಮ್ ಡೆಂಟಲ್ ಕಾಲೇಜ್ ಧಾರವಾಡ ಇವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾಹಿತಿ ನೀಡಲಿದ್ದಾರೆ. ಎಂ.ಬಿ.ಬಿ.ಎಸ್, ಬಿ.ಡಿ.ಎಸ್, ಬಿ.ಎ.ಎಂ.ಎಸ್, ಬಿ.ಎಚ್.ಎಂ.ಎಸ್, ಯುನಾನಿ ಮೆಡಿಸನ್ಸ್, ವೆಟರನರಿ ಸೈನ್ಸ್ ಮುಂತಾದ ಕೋರ್ಸುಗಳ ಬಗ್ಗೆ ಮಾಹಿತಿ, ರ್‍ಯಾಂಕಿಂಗ್ ಮತ್ತು ಕಟ್‌ಆಫ್, ಸೀಟ್ ಆಯ್ಕೆ ಪ್ರಕ್ರಿಯೆ ಕುರಿತು ಮಾಹಿತಿ ನೀಡಲಿದ್ದಾರೆ. ಈ ಕಾರ್ಯಾಗಾರದಲ್ಲಿ ತಮ್ಮ ಭಾಗವಹಿಸುವಿಕೆಯನ್ನು ವಿದ್ಯಾರ್ಥಿ/ವಿದ್ಯಾರ್ಥಿನಿಯರು 24-06-2025ರ ಒಳಗಾಗಿ ದೂರವಾಣಿ 0836-2747357 ಮೂಲಕ ಅಥವಾ ಮೊ: (ರತ್ನಾ ಹಿಪ್ಪರಗಿ)9980125686/8861201828ಗೆ ವಾಟ್ಸಪ್ ಮೂಲಕ ತಮ್ಮ ಹೆಸರನ್ನು ನೋಂದಾಯಿಸಬೇಕು. ನಿಗದಿತ ಸಮಯಕ್ಕಿಂತ ಹತ್ತು ನಿಮಿಷ ಮುಂಚಿತವಾಗಿ ಈ ಕೆಳಗಿನ ಲಿಂಕ್‌ನಲ್ಲಿ ಪ್ರವೇಶ ಆಗಬೇಕು. https://us06web.zoom.us/j/83537478081?pwd=WjdwOThTQmVkSlZtNmkvS1hka2g4dz09, Meeting ID: 835 3747 8081, Passcode: 123456. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ವಿದ್ಯಾರ್ಥಿಗಳು ಡಾ. ಸಂಗಮೇಶ ಸಜ್ಜನರ-ಮೊ: 994555084, ಡಾ. ಪ್ರಭು ಗಂಜಿಹಾಳ-ಮೊ: 9448775346 ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಬಸವದಳದ ಶರಣ ಸಂಗಮ ಕಾರ್ಯಕ್ರಮದಲ್ಲಿ ಡಾ. ರಾಜಶೇಖರ ದಾನರೆಡ್ಡಿ ಉಪನ್ಯಾಸ

# ಉಭಯ ಗಾಯನಾಚಾರ್ಯರು ಅಂಧರ ಬಾಳಿನ ಬೆಳಕು

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ನಾಡಿನ ಈ ಪುಣ್ಯ ನೆಲದಲ್ಲಿ ಅನೇಕ ಶಿವಶರಣರು, ಮಹಾತ್ಮರು ಆಗಿ ಹೋಗಿದ್ದಾರೆ. ಅಂತಹ ಮಹಾತ್ಮರಲ್ಲೇ ತಮ್ಮ ವಿಶಿಷ್ಟತೆಯಿಂದ ಬೆಳಗಿದವರು ಪಂ. ಪಂಚಾಕ್ಷರ ಗವಾಯಿಗಳು ಹಾಗೂ ಪಂ. ಪುಟ್ಟರಾಜ ಗವಾಯಿಗಳು. ಗುರುವಿನ ಅನುಗ್ರಹದಿಂದ ಕಷ್ಟ-ಕಾರ್ಪಣ್ಯಗಳನ್ನೆದುರಿಸಿ ಉಭಯ ಗಾಯನಾಚಾರ್ಯರು ತಮ್ಮ ಅದ್ವಿತೀಯ ಸಂಗೀತ ಪಾಂಡಿತ್ಯವನ್ನು ತಮ್ಮ ಶಿಷ್ಯರಿಗೆ ಧಾರೆ ಎರೆದು ಸಂಗೀತ ಕ್ಷೇತ್ರಕ್ಕೆ ಅಮೂಲ್ಯ ಕಾಣಿಕೆಗಳನ್ನು ನೀಡಿದ್ದಾರೆ ಎಂದು ಉಪನ್ಯಾಸಕ ಡಾ. ರಾಜಶೇಖರ ದಾನರೆಡ್ಡಿ ಹೇಳಿದರು.

ಅವರು ಬಸವದಳದ 1650ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಪಂ.ಪಂಚಾಕ್ಷರಿ ಗವಾಯಿ, ಪಂ. ಪುಟ್ಟರಾಜ ಗವಾಯಿಗಳ ಕುರಿತು ಉಪನ್ಯಾಸ ನೀಡುತ್ತಿದ್ದರು.

ಪಂಚಾಕ್ಷರಿಗಳ ಸಂಗೀತ ಸಾಧನೆಗೆ ಅಂಧತ್ವ ಎಂದೂ ಅಡ್ಡಿಯಾಗಲಿಲ್ಲ. ಬಾಲ್ಯದಿಂದಲೇ ಗದಿಗೆಯ್ಯ ಭಜನೆ, ದೊಡ್ಡಾಟ, ಭಕ್ತಿ ಗೀತೆಗಳನ್ನು ಇಂಪಾಗಿ ಹಾಡುತ್ತಿದ್ದರು. ಇಂತಹ ಬಾಲಕನ ಮೇಲೆ ಹಾನಗಲ್ಲ ಕುಮಾರ ಸ್ವಾಮಿಗಳ ಕೃಪಾದೃಷ್ಟಿ ಬಿತ್ತು.

ಇದು ಗದಿಗೆಯ್ಯನ ಸಾಧನೆಗೆ ದಾರಿಯಾಯಿತು. ಇಲ್ಲಿ ಪಂಚಾಕ್ಷರಿಗೆ ಕರ್ನಾಟಕಿ ಮತ್ತು ಹಿಂದೂಸ್ತಾನಿ ಎರಡೂ ಪ್ರಕಾರಗಳಲ್ಲಿ ನಿಪುಣನನ್ನಾಗಿ ಮಾಡಿದರು. ಪಂಚಾಕ್ಷರಿ ಕೂಡಾ ತುಂಬ ಆಸಕ್ತಿಯಿಂದ ಕಲಿತು ಗವಾಯಿಯಾಗಿ ನಾಡಿಗೆ ಶ್ರೇಷ್ಠ ಕೊಡುಗೆ ನೀಡಿದರು. ಮುಂದೆ ಇವರ ಬಳಿ ಕಲಿತವರಲ್ಲಿ ಪುಟ್ಟರಾಜ ಗವಾಯಿ, ಬಸವರಾಜ ರಾಜಗುರು, ಸಿದ್ಧರಾಮ ಜಂಬಲದಿನ್ನಿ, ಪಂಚಾಕ್ಷರಿ ಸ್ವಾಮಿ ಮತ್ತಿಗಟ್ಟಿ, ಅರ್ಜುನಸಾ ನಾಕೋಡ, ಶೇಷಾದ್ರಿ ಗವಾಯಿ, ಚಿತ್ತರಗಿ ಗಂಗಾಧರ ಶಾಸ್ತ್ರಿ ಸೇರಿದಂತೆ ಇನ್ನೂ ಹಲವಾರು ಸಂಗೀತದಲ್ಲಿ ಪಾರಮ್ಯ ಹೊಂದಿ ನಾಡಿನಲ್ಲಿ ಖ್ಯಾತರಾದರು ಎಂದು ತಿಳಿಸಿದರು.

ಪಂಚಾಕ್ಷರಿ ಗವಾಯಿಗಳ ನಂತರ ಅವರ ಕರಸಂಜಾತ ಶಿಷ್ಯರಾದ ಪುಟ್ಟರಾಜ ಗವಾಯಿಗಳು ವೀರೇಶ್ವರ ಪುಣ್ಯಾಶ್ರಮದ ಕರ್ಣಧಾರತ್ವವನ್ನು ವಹಿಸಿಕೊಂಡು ಗುರುವನ್ನು ಮೀರಿಸುವ ಶಿಷ್ಯನೆನಿಸಿಕೊಂಡರು.

ಅವರು ಬರೀ ಸಂಗೀತ ಕ್ಷೇತ್ರವಷ್ಟೇ ಅಲ್ಲ, ಸಾಹಿತ್ಯ ಕ್ಷೇತ್ರಕ್ಕೂ ಅಮೂಲ್ಯವಾದ ಕೊಡುಗೆ ನೀಡಿರುವರು. ತ್ರಿಕಾಲ ಪೂಜಾನಿಷ್ಠರೂ ಆಗಿ ಅನೇಕ ಶಿಕ್ಷಣ ಸಂಸ್ಥೆಗಳನ್ನು ತೆರೆದು ಆಶ್ರಮದ ಮಕ್ಕಳಿಗೆ ಎಲ್ಲ ತರಹದ ಶಿಕ್ಷಣವನ್ನು ಸಿಗುವಂತೆ ಮಾಡಿದರು. ಆರಂಭದಲ್ಲಿ ಪುಟ್ಟರಾಜ ಬದುಕು ಅಂಧಕಾರದಿಂದ ತುಂಬಿತ್ತು. ಹುಟ್ಟಿದ 6 ತಿಂಗಳಿಗೆ ಕಣ್ಣನ್ನು ಕಳೆದುಕೊಂಡು ಮಾವನ ಮನೆಯಲ್ಲಿ ಬೆಳೆದರು. ಸ್ವತಃ ಸಂಗೀತಗಾರರಾಗಿದ್ದ ಚಂದ್ರಶೇಖರಯ್ಯ ಮಾವನ ಮನೆಯಲ್ಲಿ ಹಾರ್ಮೋನಿಯಂ ಪೇಟಿ ಇತ್ತು. ಮಾವ ಹಾರ್ಮೋನಿಯಂ ಬಾರಿಸುವದನ್ನು ಕದ್ದು ಕೇಳಿ ಮನನ ಮಾಡಿಕೊಂಡು ಪುಟ್ಟಯ್ಯ, ಮಾವ ಹೊರಗೆ ಹೋದ ಸಂದರ್ಭದಲ್ಲಿ ಹಾರ್ಮೋನಿಯಂ ನುಡಿಸುತ್ತ, ಅದರಲ್ಲಿ ಪಾರಮ್ಯ ಸಾಧಿಸಿದರು ಎಂದು ವಿವರಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ ವಹಿಸಿ, ಅಧ್ಯಕ್ಷೀಯ ನುಡಿಗಳನ್ನಾಡಿದರು. ವೇದಿಕೆಯ ಮೇಲೆ ಸಹಜ ಶಿವಯೋಗ ನಡೆಸಿಕೊಟ್ಟ ರೇಣಕ್ಕ ಕರೇಗೌಡ್ರ ಉಪಸ್ಥಿತರಿದ್ದರು. ಪ್ರಶಾಂತ ಲಿಂಗಧಾಳರು ಸ್ವಾಗತಿಸಿದರು. ವೀರೇಶ ಲಿಂಗದಾಳ ನಿರೂಪಿಸಿದರು.




ಪಂಚಾಕ್ಷರಿಗಳ ನಂತರ ಪುಣ್ಯಾಶ್ರಮದ ನೇತೃತ್ವ ವಹಿಸಿ ಸಂಸ್ಥೆಯನ್ನು ಬೆಳೆಸಿದರು. ಅವರ ವ್ಯಕ್ತಿತ್ವ ಹಿಮಾಲಯದಷ್ಟು ಎತ್ತರಕ್ಕೆ ಬೆಳೆದಿರುವದನ್ನು ಈ ನಾಡು ಕಂಡಿದೆ. ಇವರನ್ನು ಅನೇಕ ಪ್ರಶಸ್ತಿಗಳು ಹುಡುಕಿಕೊಂಡು ಬಂದಿವೆ. ಈ ಇಬ್ಬರು ಉಭಯ ಗುರುಗಳ ಸಾಧನೆ, ತ್ಯಾಗ ಮತ್ತು ತಮ್ಮ ಶಿಷ್ಯಂದಿರಿಗೆ ಸಂಗೀತ ಧಾರೆ ಎರೆದ ಪರಿಣಾಮ ಅಸಂಖ್ಯ ಶಿಷ್ಯಂದಿರು ಈ ನಾಡಿನ, ದೇಶದ ಮೂಲೆ ಮೂಲೆಯಲ್ಲೂ ಸಂಗೀತದ ಸೇವೆ ನೀಡುತ್ತಿದ್ದಾರೆ. ಇಂದು ವೀರೇಶ್ವರ ಪುಣ್ಯಾಶ್ರಮ ನಾಡಿನಲ್ಲೆಲ್ಲ ಸಂಗೀತ ವಿಶ್ವವಿದ್ಯಾಲಯವೆಂದೇ ಖ್ಯಾತವಾಗಿದೆ. ಆದರೆ ಇವರೀರ್ವರ ಭೌತಿಕ ಕಾಯ ಇರದಿದ್ದರೂ ಶಿಷ್ಯಂದಿರಲ್ಲಿ, ಅವರ ಸಂಗೀತದಲ್ಲಿ ಉಭಯ ಪೂಜ್ಯರು ಕಾಣುತ್ತಿದ್ದಾರೆಂದು ದಾನರೆಡ್ಡಿ ಹೇಳಿದರು.

# ಮೂಲಭೂತ ಸೌಲಭ್ಯಗಳಿಗೆ ಆಗ್ರಹಿಸಿ ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು, ಶೌಚಾಲಯ ಸೇರಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಂತೆ ಆಗ್ರಹಿಸಿ ನಾಗರಿಕರು ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಅವರಿಗೆ ಮನವಿ ಸಲ್ಲಿಸಿದರು.



ಈ ವೇಳೆ ಮಾತನಾಡಿದ ರಾಮು ಪೂಜಾರ, ಪಟ್ಟಣದಲ್ಲಿ ಕಳೆದ ಹಲವಾರು ವರ್ಷಗಳಿಂದಲೂ ಪೈಪ್‌ಲೈನ್ ದುರಸ್ತಿ ಕಾರಣದಿಂದ ಮಳೆಗಾಲದಲ್ಲೂ 20 ದಿನಗಳಿಗೊಮ್ಮೆ ಕುಡಿಯುವ ನೀರು ಸರಬರಾಜಾಗುತ್ತಿದೆ. ಪಟ್ಟಣದ ಬಹುತೇಕ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ಸಾರ್ವಜನಿಕರು ನಿತ್ಯ ಸಂಚಾರಕ್ಕೆ ಪರದಾಡುತ್ತಿದ್ದಾರೆ. ಚರಂಡಿಗಳ ಸಮಸ್ಯೆಯಿಂದ ಮಳೆನೀರೆಲ್ಲ ರಸ್ತೆಯುದ್ದ ಹರಿದು ಸಮಸ್ಯೆಯಾಗುತ್ತಿದೆ. ಪಟ್ಟಣ ಸೇರಿ ಗ್ರಾಮೀಣ ಭಾಗದ ಜನರಿಗೆ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೇ ಪರದಾಡುತ್ತಾರೆ. ಮುಖ್ಯ ಬಜಾರ ರಸ್ತೆಯಲ್ಲಿ ಮಹಿಳೆಯರಿಗೆ ಶೌಚಾಲಯ ವ್ಯವಸ್ಥೆ ಇಲ್ಲದೇ ತೊಂದರೆಯಾಗುತ್ತಿದೆ.

ಇಲ್ಲಿನ ದೇವಾಲಯಗಳು, ಬಸದಿ, ಮಸೀದಿಗಳು, ತಹಸೀಲ್ದಾರ ಕಚೇರಿ, ನ್ಯಾಯಾಲಯಕ್ಕೆ ಮಾರ್ಗಸೂಚಕ ಫಲಕಗಳು ಇಲ್ಲದೆ ದಿಕ್ಕುತೋಚದ ಪರಿಸ್ಥಿತಿಯಿದೆ. ಬಜಾರ್ ರಸ್ತೆ ಸೇರಿ ನಗರೋತ್ಥಾನ ಕಾಮಗಾರಿಗಳು ಅರ್ಧಕ್ಕೆ ನಿಂತಿವೆ. ಬೀದಿ ದೀಪಗಳ ನಿರ್ವಹಣೆ, ಸ್ವಚ್ಛತೆ ಹೀಗೆ ಸಮಸ್ಯೆಗಳ ಆಗರವೇ ಆಗಿರುವ ಪಟ್ಟಣದ ಅಭಿವೃದ್ಧಿಗೆ ಪುರಸಭೆಯವರು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಬಿಜೆಪಿ ಶಿರಹಟ್ಟಿ ಮಂಡಳ ಪ್ರ.ಕಾರ್ಯದರ್ಶಿ ಅನಿಲ ಮುಳುಗುಂದ, ರಂಗಣ್ಣ ಬದಿ, ರಮೇಶರೆಡ್ಡಿ ಮೇಲಗಿರಿ, ನವೀನ ಕುಂಬಾರ, ನೇಮಿನಾಥ ಪಾಟೀಲ, ಟಾಕಪ್ಪ ಸಾತಪುತೆ, ಲಕ್ಷ್ಮಣ ಹಳ್ಳಿಕೇರಿ, ಮಂಜು ಸಾತಪುತೆ, ವಿನಾಯಕ ಕಾಂಬಳೆ, ಪ್ರಜ್ವಲ ಕಾತರಕಿ, ಬಸವರಾಜ ಗಡ್ಡದೇವರಮಠ, ಯಲ್ಲಪ್ಪ ಬಾಕಳೆ ಮುಂತಾದವರಿದ್ದರು.

### ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಯಲ್ಲಿ ಪ್ರಥಮ ಸ್ಥಾನ ಪಡೆದ ರಾಹುಲ್ ವಸಂತ ಸಿದ್ದಮ್ಮನಹಳ್ಳಿ

# ಬಹುಮಾನವಾಗಿ 1 ಕೆ.ಜಿ ತೂಕದ ಬೆಳ್ಳಿ ಗದೆ



■ವಿಜಯಸಾಕ್ಷಿ ಸುದ್ದಿ, ಗದಗ

ಲಿಂ. ಪಂಚಾಕ್ಷರಿ ಗವಾಯಿಗಳರವರ 81ನೇ ಹಾಗೂ ಪದ್ಮಭೂಷಣ ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳರವರ 15ನೇಯ ಪುಣ್ಯಸ್ಮರಣೋತ್ಸವ ಹಾಗೂ ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಗದಗ-ಬೆಟಗೇರಿ ಜನರಲ್ ವರ್ಕ್ಸ್ ಹಾಗೂ ಹಮಾಲರ ಚಕ್ಕಡಿಯವರ ಸಮಿತಿಯಿಂದ ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಗೆ ಯುವ ಮುಖಂಡ ಕೃಷ್ಣಗೌಡ ಪಾಟೀಲ ಚಾಲನೆ ನೀಡಿದರು. ಪೂಜ್ಯ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸಿದ್ದರು. ಕುಸ್ತಿಯಲ್ಲಿ ರಾಹುಲ್ ವಸಂತ ಸಿದ್ದಮ್ಮನಹಳ್ಳಿ ವಿಜೇತರಾದ ನಿಮಿತ್ತ ಗದಗ ಜಿಲ್ಲಾ ಕುಸ್ತಿ ತರಬೇತಿದಾರ ವಿನಾಯಕ ಎಂಕಂಚಿ 1 ಕೆ.ಜಿ ತೂಕದ ಬೆಳ್ಳಿ ಗದೆಯನ್ನು ನೀಡಿ ಸನ್ಮಾನಿಸಿದರು.

ಸುಭಾಸ ಸಂಗಪ್ಪ ಕಡಿಗೇರಿ, ಆದಪ್ಪ ಮಾರೆಪ್ಪನವರ, ಇಮಾಮಸಾಬ ರೋಣದ, ಅಮರಪ್ಪ ಕುಡಗುಂಟಿ ಕುಸ್ತಿ ನಿರ್ಣಾಯಕರಾಗಿ ಪಾಲ್ಗೊಂಡಿದ್ದರು. ಸಂಘದ ಸದಸ್ಯರುಗಳಾದ ಅಯ್ಯಪ್ಪ ನಾಯ್ಕರ, ಮಹಮ್ಮದಸಾಬ ವಾಲೇಕರ, ಇಮಾಮಸಾಬ ರೋಣದ, ಗೋವಿಂದಪ್ಪ ಮುಂಡರಗಿ, ರಾಮಣ್ಣ ವಾಲ್ಮೀಕಿ, ಯಲ್ಲಪ್ಪ ಗೊಂದಿ, ರವಿ ರಾಯರದೊಡ್ಡಿ, ಮಕ್ತುಮಸಾಬ ನಾಗನೂರ, ರಂಗಪ್ಪ ಯರಗುಡಿ, ಬಸವರಾಜ ಸೂಡಿ, ಮಾರುತಿ ರಾಯರದೊಡ್ಡಿ, ದೇವರಾಜ ಬಿನ್ನಾಳ, ಯಲ್ಲಪ್ಪ ಬೇವಿನಮರದ, ಬಸವರಾಜ ಬೇವಿನಮರದ, ಸುಭಾಸ ಕಟಗೇರಿ, ಇಮಾಮಸಾಬ ರೋಣದ, ಅಯ್ಯಪ್ಪ ನಾಯ್ಕರ, ರಾಮಣ್ಣ ವಾಲ್ಮೀಕಿ, ಗೋವಿಂದಪ್ಪ ಮುಂಡರಗಿ, ಬಸಣ್ಣ ಸೂಡಿ, ಮಾಬುಸಾಬ ವಾಲಿಕಾರ, ಮಾರುತಿ ರಾಲದೊಡ್ಡಿ, ದೇವರಾಜ ಬಿನ್ನಾಳ, ಯಲ್ಲಪ್ಪ ಬೇವಿನಮರದ, ರವಿ ರಾಲದೊಡ್ಡಿ, ವಸಂತ ಸಿದ್ದಮ್ಮನಹಳ್ಳಿ, ದೇವಪ್ಪ ಗಡಾದ, ಅಮರಪ್ಪ ಗುಡಗುಂದಿ, ಸೋಮನಾಥ ಹಾತಲಗೇರಿ, ದೇವಪ್ಪ ಕನ್ಯಾಳ, ಅಮೀನಸಾಬ ಅಣ್ಣಿಗೇರಿ, ಅಲ್ಲಾಸಾಬ ನದಾಫ್, ರಾಮಚಂದ್ರ ಹರಿಜನ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಬಿ.ಬಿ. ಅಸೂಟಿ, ಅಶೋಕ ಸಂಕಣ್ಣವರ, ಪ್ರಕಾಶ ಕರಿ, ವಸಂತ ಸಿದ್ದಮ್ಮನಹಳ್ಳಿ, ರಾಮಣ್ಣ ಪಲದೊಡ್ಡಿ ಸೇರಿದಂತೆ ಹಮಾಲರ ಚಕ್ಕಡಿಯವರ ಸಮಿತಿಯ ಪದಾಧಿಕಾರಿಗಳು, ದಲಾಲ ಅಂಗಡಿಯ ವರ್ತಕರು, ಖರೀದಿದಾರರ ಅಂಗಡಿ ವರ್ತಕರು, ಬ್ರೋಕರ್‌ದಾರರು ಪಾಲ್ಗೊಂಡಿದ್ದರು.

# ಡೊನೇಷನ್ ಹಾವಳಿ ತಡೆಗಟ್ಟಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಈಗಾಗಲೇ ಶಾಲಾ-ಕಾಲೇಜುಗಳು ಪ್ರಾರಂಭವಾಗಿದ್ದು, ಖಾಸಗಿ ಶಾಲಾ-ಕಾಲೇಜುಗಳಲ್ಲಿ ವಿಶೇಷವಾಗಿ ಎಲ್.ಕೆ.ಜಿ, ಯು.ಕೆ.ಜಿ ಮತ್ತು ನರ್ಸರಿಗಳಲ್ಲಿ ಆಡಳಿತ ಮಂಡಳಿಯವರು ಮನಬಂದಂತೆ ಡೊನೇಷನ್ ಪಡೆಯುತ್ತಿದ್ದು, ಕೂಡಲೇ ಕಾನೂನುಬಾಹಿರವಾಗಿ ನಡೆಸುತ್ತಿರುವ ಇಂತಹ ಶೋಷಣೆಯನ್ನು ನಿಲ್ಲಿಸಿ ಬಡ ಹಾಗೂ ಹಿಂದುಳಿದ ಶೋಷಿತ ಜನಾಂಗದ ಮಕ್ಕಳಿಗೂ ಉತ್ತಮ ಶಿಕ್ಷಣ ದೊರಕುವಂತೆ ಮಾಡುವುದರೊಂದಿಗೆ ಇಂತಹ ಖಾಸಗಿ ಸಂಸ್ಥೆಯವರ ಮೇಲೆ ಸೂಕ್ತ ಕ್ರಮ ಜರುಗಿಸಬೇಕೆಂದು ಕರ್ನಾಟಕ ದಲಿತ ವಿದ್ಯಾರ್ಥಿ ಒಕ್ಕೂಟದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪ.ಜಾತಿ/ಪ.ವರ್ಗ ಕಾಲೇಜು ವಸತಿ ನಿಲಯಗಳಿಗೆ ಪ್ರವೇಶ ಬಯಸಿ ಅರ್ಜಿ ಸಲ್ಲಿಸಿದ ಎಲ್ಲರಿಗೂ ಪ್ರವೇಶ ನೀಡುವುದು ಹಾಗೂ ವಸತಿ ನಿಲಯಗಳಲ್ಲಿ ಅತಿಥಿ ನೆಪದಲ್ಲಿ ಕಾನೂನುಬಾಹಿರವಾಗಿ ಕೆಲ ವ್ಯಕ್ತಿಗಳು ಸೇರಿಕೊಳ್ಳುತ್ತಿದ್ದು, ಇದರಿಂದ ವಿದ್ಯಾರ್ಥಿಗಳಿಗೆ ತೊಂದ-ರೆಯಾಗುತ್ತಿದೆ. ಅಂತವರ ಮೇಲೆ ಕ್ರಮ ಜರುಗಿಸಿ ವಸತಿ ನಿಲಯಗಳಲ್ಲಿ ಅಕ್ರಮವಾಗಿ ತಂಗುತ್ತಿರುವವರ ಮೇಲೆ ಕ್ರಮ ಜರುಗಿಸುವುದು ಸೇರಿದಂತೆ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಾತಾವರಣ ಕಲ್ಪಿಸಿಕೊಡಬೇಕೆಂದು ಕರ್ನಾಟಕ ದಲಿತ ವಿದ್ಯಾರ್ಥಿ ಒಕ್ಕೂಟದ ಜಿಲ್ಲಾ ಸಂಚಾಲಕ ಕೃಷ್ಣಪ್ಪ ಪೂಜಾರ, ಗದಗ ಶಹರ ಸಂಚಾಲಕ ಮಧುರಾಜ ಬಳ್ಳಾರಿ, ಗದಗ ತಾಲೂಕಾ ಸಂಚಾಲಕ ವಿಠ್ಠಲ ಹುಣಸೀಮರದ ಮುಂತಾದವರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶರಣು ಕರಡಗಿ, ಶರಣು ವಡ್ಡರ, ಪ್ರಶಾಂತ ಪೂಜಾರ, ವಿನೋದ ಕಿತ್ತೂರ, ಲಲಿತಾ ಲಮಾಣಿ, ನಾಗಮ್ಮ ತಳವಾರ, ಮಂಜುಳಾ ತಳವಾರ, ನಾಗಮಣಿ ಮಾದರ, ಅನಿತಾ ಲಮಾಣಿ, ಜೋಸ್ನಾ ಲಮಾಣಿ, ರಮೇಶ ಹುಣಸೀಮರದ, ಮುತ್ತು ಮಾಳಮ್ಮನವರ, ನಾಗರಾಜ ಹುಣಸೀಮರದ, ಶರಣಪ್ಪ ಹೆಗನಕುಂಟಿ, ಭಾಗಪ್ಪ ಮಡಿವಾಳಕರ, ಚಂದ್ರು ಹರಿಜನ, ಸಿದ್ದಯ್ಯ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು.

# ನೇತ್ರದಾನ ಮಾಡಿ ಮಾದರಿಯಾದ ಡಿಸಿಎಂ ಡಿ.ಕೆ. ಶಿವಕುಮಾರ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನೇತ್ರದಾನ ಮಹಾದಾನ ಎಂಬಂತೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಇದೀಗ ಎಲ್ಲರಿಗೂ ಮಾದರಿಯಾಗುವ ಕೆಲಸ ಮಾಡಿದ್ದಾರೆ. ರಾಹುಲ್ ಗಾಂಧಿ ಅವರ ಜನ್ಮದಿನ ಹಿನ್ನೆಲೆಯಲ್ಲಿ ರಾಜ್ಯ ಯುವ ಕಾಂಗ್ರೆಸ್ ವತಿಯಿಂದ ಕೆಪಿಸಿಸಿ ಕಚೇರಿಯಲ್ಲಿ ನೇತ್ರದಾನ ಶಿಬಿರ ಆಯೋಜನೆ ಮಾಡಲಾಗಿತ್ತು. ಈ ವೇಳೆ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯಮಂತ್ರಿ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ನೇತ್ರದಾನ ಮಾಡಿದರು.



ನೇತ್ರದಾನ ಪತ್ರಕ್ಕೆ ಸಹಿ ಹಾಕಿದ ನಂತರ ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. "ರಾಹುಲ್ ಗಾಂಧಿ ಅವರ ಜನ್ಮದಿನ ಹಿನ್ನೆಲೆಯಲ್ಲಿ ನಮ್ಮ ಯುವ ಕಾಂಗ್ರೆಸ್ ವತಿಯಿಂದ ನೇತ್ರದಾನ ಶಿಬಿರ ಹಮ್ಮಿಕೊಂಡಿದ್ದಾರೆ. ನಾನು ಕೂಡ ನನ್ನ ನೇತ್ರ ದಾನ ಮಾಡಿದ್ದೇನೆ" ಎಂದು ತಿಳಿಸಿದರು.

# ಬೆಲೆ ಕುಸಿತ: ಹೃದಯಾಘಾತದಿಂದ ಮಾವು ವ್ಯಾಪಾರಿ ದುರ್ಮರಣ!

■ವಿಜಯಸಾಕ್ಷಿ ಸುದ್ದಿ, ಕೋಲಾರ

ಜಿಲ್ಲೆಯ ಶ್ರೀನಿವಾಸಪುರದಲ್ಲಿ ಮಾವು ಬೆಲೆ ಕುಸಿತದಿಂದ ಕಂಗಾಲಾಗಿದ್ದ ರೈತನೋರ್ವ ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ಜರುಗಿದೆ. 55 ವರ್ಷದ ಮೊಹಮ್ಮದ್ ಶಫಿವುಲ್ಲಾ ಅಲಿಯಾಸ್ ಅನ್ವರ್ ಮೃತ ರೈತ.

ಮೃತ ಅನ್ಸರ್, ತಾಜಾ ಫ್ರೂಟ್ ಮಂಡಿ ಮಾಲಿಕನಾಗಿದ್ದು, ಸುಮಾರು 30 ಲಕ್ಷ ರೂಪಾಯಿ ಮಾವಿನ ವಹಿವಾಟು ಮಾಡಿದ್ದ. ಬೆಲೆ ಕುಸಿತದಿಂದ ಮಾವಿನ ತೋಟಕ್ಕೆ ಸಿಂಪಡಿಸಿದ್ದ ಔಷದಿ ಬೆಲೆಯೂ ಬಾರದೆ ಸಂಕಷ್ಟಕ್ಕೆ ಸಿಲುಕಿದ್ದ.

# ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಅಂಧತ್ವ ನಿವಾರಣಾ ವಿಭಾಗ, ಜಿಲ್ಲಾ ಆರೋಗ್ಯ ಇಲಾಖೆ, ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಇವರ ಸಹಯೋಗದೊಂದಿಗೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯಲ್ಲಿ (ಜಿಲ್ಲಾ ಸ್ಟೇಡಿಯಂ ಹತ್ತಿರ) ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ರೋಟರಿ ಐ ಕೇರ್ ಸೆಂಟರ್‌ನಲ್ಲಿ ಏರ್ಪಡಿಸಲಾಗಿದೆ.

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ಕೈಗೊಳ್ಳುವ 204ನೇ ಉಚಿತ ನೇತ್ರ ಚಿಕಿತ್ಸಾ ಶಿಬಿರವನ್ನು ದಿ. ರಾಮರಾವ್ ಎಮ್. ಕುಲಕರ್ಣಿ ಹಾಗೂ ದಿ. ಜಾನಕಿಬಾಯಿ ರಾ.ಕುಲಕರ್ಣಿ ಇವರ ಸ್ಮರಣಾರ್ಥ ಮಾಧವ ರಾಮರಾವ್ ಕುಲಕರ್ಣಿ ಹಾಗೂ ಕುಟುಂಬದವರು ಗದಗ ಹಾಗೂ ದಿ. ಸೋಮಪ್ಪ ಎಸ್. ಡಂಬಳ ಹಾಗೂ ದಿ. ಶಕುಂತಲಾ ಎಸ್.ಡಂಬಳ ಇವರ ಸ್ಮರಣಾರ್ಥ ಪ್ರೇಮಾ ಮೇಟಿ ಹಾಗೂ ಸಹೋದರರು ಪ್ರಾಯೋಜಕತ್ವ ವಹಿಸಿಕೊಂಡಿದ್ದಾರೆ.

ಜೂನ್ 21ರ ಸಾಯಂಕಾಲ 5 ಗಂಟೆಗೆ ತಪಾಸಣೆ ಹಾಗೂ ಜೂನ್ 22ರಂದು ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುವುದು. ತಪಾಸಣೆಗೆ ಬರುವ ರೋಗಿಗಳು ತಮ್ಮ ಆಧಾರ್ ಕಾರ್ಡ್‌ನ ಝರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು. ಬ್ಲಡ್ ಪ್ರೆಶರ್ (ಃ.ಕ.) ಹಾಗೂ ಸಕ್ಕರೆ ಕಾಯಿಲೆ (ಖಣಂಚಿಡಿ) ಇದ್ದವರಿಗೆ ಅವುಗಳು ನಿಯಂತ್ರಣಕ್ಕೆ ಬರದ ಹೊರತು ಆಪರೇಶನ್ ಮಾಡಲಾಗುವುದಿಲ್ಲ.

ಕಣ್ಣಿನ ಪೊರೆ ಬಂದ ರೋಗಿಗಳು ತಮ್ಮ ಹೆಸರನ್ನು ರೋಟರಿ ಆಯ್ ಕೇರ್ ಸೆಂಟರ್‌ನಲ್ಲಿ (ಸ್ಟೇಡಿಯಂ ಹತ್ತಿರ) ನೋಂದಾಯಿಸಬೇಕೆಂದು ಸಂಸ್ಥೆಯ ಅಧ್ಯಕ್ಷರಾದ ರೊ. ಇಂ. ಶ್ರೀಧರ ಎನ್.ಸುಲ್ತಾನಪೂರ, ಕಾರ್ಯದರ್ಶಿ ರೊ. ಇಂ. ಬಾಲಕೃಷ್ಣ ಕಾಮತ, ಐ.ಒ.ಎಲ. ಚೇರಮನ್ ರೊ. ಡಾ. ಶೇಖರ ಡಿ.ಸಜ್ಜನರ ವಿನಂತಿಸಿಕೊಂಡಿದ್ದಾರೆ.

### ಮೋದಿ ನೇತೃತ್ವದ ಕೇಂದ್ರ ಸರಕಾರಕ್ಕೆ 11 ವರ್ಷ: ಬಿಜೆಪಿ ಕಚೇರಿಯಲ್ಲಿ ಶಾಸಕ ಸಿ.ಸಿ ಪಾಟೀಲ ಸುದ್ದಿಗೋಷ್ಠಿ

# ಮೋದಿ ನೇತೃತ್ವದಲ್ಲಿ ದೇಶದ ಅಭಿವೃದ್ಧಿಗೆ ವೇಗ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತವನ್ನು ಜಗತ್ತಿನ 4ನೇ ಶಕ್ತಿಶಾಲಿ ದೇಶವನ್ನಾಗಿ ಮಾಡಿದ ಕೀರ್ತಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರಕ್ಕೆ ಸಲ್ಲುತ್ತದೆ. 2004ರಿಂದ 2014ರ ಅವಧಿಯಲ್ಲಿ ಯುಪಿಎ ಸರಕಾರ ಕರ್ನಾಟಕದ ಅಭಿವೃದ್ಧಿ ಯೋಜನೆಗಳಿಗೆ 5,390 ಕೋಟಿ ರೂ ವ್ಯಯಿಸಿದೆ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಹೇಳಿದರು.

ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರ 11 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಗುರುವಾರ ನಗರದ ಬಿಜೆಪಿ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು.

ರೈಲ್ವೆ ಯೋಜನೆಗಳಿಗೆ ಸರಾಸರಿ 835 ಕೋಟಿ ರೂ., ಕೇಂದ್ರ ಪ್ರಾಯೋಜಿತ ಕಾರ್ಯಕ್ರಮಗಳಿಗೆ 39,922 ಕೋಟಿ ರೂ. ನೀಡಿದೆ. ಆದರೆ 2014ರಿಂದ ಈವರೆಗೆ ಎನ್‌ಡಿಎ ಸರಕಾರ ಅಭಿವೃದ್ಧಿಗೆ 14, 685 ಕೋಟಿ ರೂ, ರೈಲ್ವೆ ಯೋಜನೆಗಳಿಗೆ 7813 ಕೋಟಿ ರೂ. ಹಾಗೂ ಕೇಂದ್ರ ಪ್ರಾಯೋಜಿತ ಯೋಜನೆಗಳಿಗೆ 1 ಲಕ್ಷ ಕೋಟಿ ರೂ. ನೀಡಿರುವುದು ಎನ್‌ಡಿಎ ಸರಕಾರದ ಸಾಧನೆಯಾಗಿದೆ ಎಂದರು.




ಕಳೆದ 11 ವರ್ಷದಲ್ಲಿ ಇಂಗ್ಲಂಡ್ 6 ಜನ ಪ್ರಧಾನಿಗಳನ್ನು ಕಂಡಿದೆ. ಇಟಲಿ 5, ಅಮೆರಿಕಾ 4, ಜಪಾನ್ 4, ಕೆನಡಾ 3, ಜರ್ಮನಿ 3, ಫ್ರಾನ್ಸ್ ಇಬ್ಬರು ಪ್ರಧಾನಿಗಳನ್ನು ಕಂಡಿದ್ದರೆ, ಭಾರತ ಸತತ 11 ವರ್ಷಗಳಿಂದ ಮೋದಿ ನೇತೃತ್ವದಲ್ಲಿ ಮುನ್ನಡೆಯುತ್ತಿರುವುದು ವಿಕಸಿತ ಭಾರತ ನಿರ್ಮಾಣಕ್ಕೆ ಕಾರಣವಾಗಿದೆ ಎಂದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಕೇಂದ್ರ ಸರಕಾರ ಗದಗ ಜಿಲ್ಲೆಗೆ ವಿಶೇಷ ಅನುದಾನ ನೀಡಿದೆ. ಅಮೃತ ಸಿಟಿ ಯೋಜನೆಯಡಿ 195 ಕೋಟಿ ರೂ. ನೀಡಿದೆ. ಅದೇ ರೀತಿ ಕೇಂದ್ರ ರಸ್ತೆ ನಿಧಿಗೆ 55 ಕೋಟಿ ರೂ, ಗದಗ ಅಮೃತ ಭಾರತ್ ರೈಲ್ವೆ ನಿಲ್ದಾಣಕ್ಕೆ 23 ಕೋಟಿ, ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ 3630 ಮನೆಗಳ ಮಂಜೂರಾತಿ ಕೊಟ್ಟಿದೆ. ಸ್ವಚ್ಛಭಾರತ, ಉಜ್ವಲಾ ಯೋಜನೆ, ಜನೌಷಧ ಕೇಂದ್ರಗಳು, ಜಲಜೀವನ್ ಮಿಷನ್ ಇತ್ಯಾದಿ ಯೋಜನೆಗಳನ್ನು ಜಾರಿಗೊಳಿಸಿ ದೇಶದ ಅಭಿವೃದ್ಧಿಯ ವೇಗವನ್ನು ಹೆಚ್ಚಿಸಿದ್ದಾರೆ. ರೈಲ್ವೆ ಮಾರ್ಗದ ವಿದ್ಯುದ್ದೀಕರಣದಲ್ಲಿ ಹೊಸ ದಾಖಲೆ ಬರೆದಿದ್ದಾರೆ ಎಂದರು.

ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ನರಗುಂದ ಬೈಪಾಸ್ ನಿರ್ಮಾಮಕ್ಕೆ 128 ಕೋಟಿ ರೂ ಬಿಡುಗಡೆ ಮಾಡಿದ್ದಾರೆ. ಭೂಸ್ವಾಧೀನದ ಶೇ. 50ರಷ್ಟು ಹಣವನ್ನು ರಾಜ್ಯ ಸರಕಾರ ಭರಿಸಬೇಕು. ಆದರೆ ಇದೇ ಮೊದಲ ಬಾರಿಗೆ ಗಡ್ಕರಿ ಅವರು, ನರಗುಂದ ಭಾಗದ ಬೈಪಾಸ್ ನಿರ್ಮಾಣಕ್ಕೆ ಅಗತ್ಯವಾದ ಭೂಸ್ವಾಧೀನಕ್ಕೆ ಶೇ. 100ರಷ್ಟು ಅನುದಾನ ಒದಗಿಸಿ ದಾಖಲೆ ಬರೆದಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮುಖಂಡರಾದ ಜಗನ್ನಾಥಸಾ ಭಾಂಡಗೆ, ಶ್ರೀಪತಿ ಉಡುಪಿ, ಎಂ.ಎಂ. ಹಿರೇಮಠ, ರವಿ ದಂಡಿನ್, ಅನಿಲ ಅಬ್ಬಿಗೇರಿ, ಮಹೇಶ ದಾಸರ ಮುಂತಾದವರು ಉಪಸ್ಥಿತರಿದ್ದರು.

## ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 15ನೇ ಹಣಕಾಸು ಆಯೋಗದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ಬ್ಲಾಕ್ ಮಟ್ಟದ ಸಾರ್ವಜನಿಕ ಆರೋಗ್ಯ ಘಟಕದ ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಅಧ್ಯಕ್ಷರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ದಿನಾಂಕ:11-03-2025ರಿಂದ 21-03-2025ರ ಸಂಜೆ 5.30ರ ವರೆಗೆ gadag.nic.in ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಸ್ವೀಕೃತವಾದ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿ ರೋಷ್ಟರ್ ಸಂ.1ರ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ದಿನಾಂಕ:15-04-2025ರಿಂದ 17-04-2025ರವರೆಗೆ ಪರಿಶೀಲಿಸಲಾಗಿದ್ದು, ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಿದ ಅಭ್ಯರ್ಥಿಗಳು ಹುದ್ದೆಗೆ ಬೇಕಾಗಿರುವ ವಿದ್ಯಾರ್ಹತೆಯನ್ನು ಹೊಂದದೇ ಇರುವ ಕಾರಣ ಉಳಿದ 1:18 ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಿ ಸದರಿ ಅಭ್ಯರ್ಥಿಗಳಿಗೆ ದಿನಾಂಕ:21-05-2025ರಿಂದ 23-05-2025ರವರೆಗೆ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದಾದರೂ ಆಕ್ಷೇಪಣೆ ಇದ್ದಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ದಿನಾಂಕ: 20-06-202 ರಿಂದ 26-06-2025ರವರೆಗೆ ಸಂಜೆ 4 ಗಂಟೆಯೊಳಗಾಗಿ ಕಚೇರಿಯ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ನಿರ್ವಹಣ ಘಟಕ, ಗದಗ ಇಲ್ಲಿ ಲಿಖಿತ ರೂಪದಲ್ಲಿ ನೀಡಲು ಸೂಚಿಸಿದೆ. ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು gadag.nic.in ವೆಬ್‌ಸೈಟ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

**ಎಸ್‌ಸಿಪಿ-ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ**

# ಅನುದಾನ ಸಮರ್ಪಕವಾಗಿ ಸದ್ಬಳಕೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಶ್ರೇಯೋಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನವು ಸಮರ್ಪಕವಾಗಿ ಸದ್ಬಳಕೆಯಾಗಬೇಕು. ನಿಗದಿತ ಅವಧಿಯೊಳಗೆ ಯೋಜನೆಯ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯವನ್ನು ಇಲಾಖೆಯ ಅಧಿಕಾರಿಗಳು ಮಾಡಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚನೆ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಸಮುದಾಯಗಳಿಗೆ ಮೀಸಲಿರಿಸಿದ ಅನುದಾನವು ಅವರಿಗೇ ತಲುಪಬೇಕು. ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಇರುವಂತೆ ನಿಗಾ ವಹಿಸಬೇಕು. ಸೌಲಭ್ಯ ತಲುಪಿಸುವಲ್ಲಿ ವಿನಾಕಾರಣ ವಿಳಂಬವಾದರೆ ಸಂಬಂಧಿತ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸೂಚಿಸಿದರು.

ಅರ್ಹ ಫಲಾನುಭವಿಗಳಿಗೆ ನೀಡುವ ಸೌಲಭ್ಯಗಳು ಗುಣಮಟ್ಟದಿಂದ ಕೂಡಿರುವ ಬಗ್ಗೆ ಅಧಿಕಾರಿಗಳು ಖಚಿತಪಡಿಸಿಕೊಂಡು ವಿತರಣೆ ಮಾಡಬೇಕು. ನಿರ್ದಿಷ್ಟ ಸಮುದಾಯದ ಕಾಲೋನಿಗಳಲ್ಲಿಯೇ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಖಚಿತಪಡಿಸಿಕೊಂಡು ಕಾಮಗಾರಿ ಅನುಷ್ಠಾನಗೊಳಿಸುವಂತೆ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, 2025-26 ನೇ ಸಾಲಿನ 31-5-2025ರ ಅಂತ್ಯದವರೆಗೆ ಎಸ್‌ಸಿ-ಎಸ್‌ಪಿ ಯೋಜನೆಯಡಿ ಜಿಲ್ಲೆಗೆ ವಿವಿಧ ಇಲಾಖೆಗಳಿಗೆ ಒಟ್ಟಾರೆ 2156.82 ಲಕ್ಷರೂ. ಬಿಡುಗಡೆಯಾಗಿದೆ. ಆ ಪೈಕಿ 1113.43 ಲಕ್ಷ ರೂ. ಖರ್ಚಾಗಿದ್ದು, 21734 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದಾರೆ.

ಟಿ.ಎಸ್.ಪಿ. ಯೋಜನೆಯಡಿ 2025-26ನೇ ಸಾಲಿನ 31-5-2025ರ ಅಂತ್ಯದವರೆಗೆ ವಿವಿಧ ಇಲಾಖೆಗಳಿಗೆ 737.20 ಲಕ್ಷ ರೂ. ಬಿಡುಗಡೆಯಾಗಿದ್ದು, ಆ ಪೈಕಿ 394.80 ಲಕ್ಷ ರೂ. ಖರ್ಚಾಗಿರುತ್ತದೆ. 14675 ಫಲಾನುಭವಿಗಳು ಯೋಜನೆಯ ಸೌಲಭ್ಯ ಪಡೆದಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪದ್ಮಾವತಿ ಜಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೊಟ್ಟೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

> ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, ಸರ್ಕಾರದ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವಾಗ ಕಡ್ಡಾಯವಾಗಿ ಶಿಷ್ಟಾಚಾರ ಪಾಲನೆಯಾಗಬೇಕು. ಕಾರ್ಯಕ್ರಮದ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸುವಾಗ ಒಂದು ವಾರ ಮುಂಚಿತವಾಗಿಯೇ ಜಿಲ್ಲಾಡಳಿತದ ಅನುಮೋದನೆ ಪಡೆಯುವುದು ಕಡ್ಡಾಯ. ಶಿಷ್ಟಾಚಾರ ಪರಿಪಾಲನೆ ಮಾಡುವಾಗ ಉದಾಸೀನತೆ ಮಾಡಬಾರದು ಎಂದು ನಿರ್ದೇಶನ ನೀಡಿದರು.

## ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಎನ್.ಎಸ್.ಯು.ಆಯ್ ಗದಗ ಜಿಲ್ಲಾ ಘಟಕದ ಅಧ್ಯಕ್ಷನಾಗಿ 2 ವರ್ಷಗಳ ಕಾಲ ಪಕ್ಷ ಸಂಘಟನೆ ಮಾಡಿರುವ ಈಗಿನ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷ ಹಾಗೂ ಎಸ್.ಎಮ್.ಇ ಸಂಸ್ಥೆಯ ಅಬ್ದುಲ್ ಕಲಾಂ ಬಿಸಿಎ ಮಹಾವಿದ್ಯಾಲಯದ ಸಂಸ್ಥಾಪಕ ಅಧ್ಯಕ್ಷ, ಶಿಕ್ಷಣ ಪ್ರೇಮಿ, ಯುವ ನಾಯಕ ಅಹಮ್ಮದ ಹುಸೇನ ಖಾಜಿ ಅವರ ಜನ್ಮದಿನದ ನಿಮಿತ್ತ ಜೂನ್ 20ರಂದು ಅವರ ಅಭಿಮಾನಿ ಬಳಗದವರು ಬೆಳಿಗ್ಗೆ 10 ಗಂಟೆಗೆ ಇಲ್ಲಿನ ಅಬ್ದುಲ್ ಕಲಾಂ ಮಹಾವಿದ್ಯಾಲಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಹಮ್ಮಿಕೊಂಡಿದ್ದಾರೆ.

ಇದರೊಂದಿಗೆ ಹಲವಾರು ರಚನಾತ್ಮಕ ಕಾರ್ಯಕ್ರಮಗಳ ಮೂಲಕ ಸಮಾಜಮುಖಿಯಾಗಿ ಜನ್ಮ ದಿನಾಚರಣೆ ಆಚರಿಸಿ ಸಂಭ್ರಮಿಸಲಿದ್ದಾರೆ ಎಂದು ಕಾಂಗ್ರೆಸ್ ಯುವ ನಾಯಕ ರಾಜು ಪೆಂಡಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಡಾ. ಧನ್ನೂರರ ಅಮೃತ ಮಹೋತ್ಸವ ಅಭಿನಂದನಾ ಸಮಾರಂಭ ಜೂ.22ಕ್ಕೆ**

## 'ಸಮಾಜಮುಖಿ' ಅಭಿನಂದನಾ ಗ್ರಂಥ ಲೋಕಾರ್ಪಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಖ್ಯಾತ ವೈದ್ಯ ಡಾ. ಕೆ.ಬಿ. ಧನ್ನೂರರ ಅಭಿನಂದನಾ ಗ್ರಂಥ 'ಸಮಾಜಮುಖಿ' ಜೂನ್ 22ಕ್ಕೆ ರೋಣದ ರಾಜೀವ ಗಾಂಧಿ ಶಿಕ್ಷಣ ಸಂಸ್ಥೆಯಲ್ಲಿ ಬೆಳಿಗ್ಗೆ 10.30ಕ್ಕೆ ಜರುಗಲಿರುವ ಡಾ. ಧನ್ನೂರರ ಅಮೃತ ಮಹೋತ್ಸವ ಅಭಿನಂದನಾ ಸಮಾರಂಭದಲ್ಲಿ ಲೋಕಾರ್ಪಣೆಗೊಳ್ಳಲಿದೆ ಎಂದು ಪ್ರಧಾನ ಸಂಪಾದಕ ಅರುಣ ಕುಲಕರ್ಣಿ ಮತ್ತು ಸಂಪಾದಕ ಎಂ.ಎಸ್. ದಢೇಸೂರಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



1975ರಿಂದಲೂ ನರೇಗಲ್ಲ ಪಟ್ಟಣದಲ್ಲಿ ವೈದ್ಯಕೀಯ ಸೇವೆ ನೀಡುತ್ತಿರುವ ಡಾ. ಧನ್ನೂರ, ನರೇಗಲ್ಲ ಭಾಗದ ಜನರ ಸಂಜೀವಿನಿಯಾಗಿದ್ದಾರೆ. ಯಾವುದೇ ಸಮಯಕ್ಕೆ ಬಂದ ರೋಗಿಯು ಅವರಿಂದ ಚಿಕಿತ್ಸೆ ಪಡೆಯದೆ ಹಿಂತಿರುಗಿದ ಉದಾಹರಣೆಗಳಿಲ್ಲ. ಈ ಭಾಗದ ಜನರ ಮನ ಗೆದ್ದಿರುವ ಡಾ. ಧನ್ನೂರರಿಗೆ ಇದೇ ಜೂನ್ 20ಕ್ಕೆ 75 ವಸಂತಗಳು ತುಂಬುತ್ತಿವೆ. ಈ ಹಿನ್ನೆಲೆಯಲ್ಲಿ ರೋಣದಲ್ಲಿ ಜೂನ್ 22ರಂದು ಈ ಅಭಿನಂದನಾ ಗ್ರಂಥವನ್ನು ಲೋಕಾರ್ಪಣೆಗೊಳಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

ಕೇವಲ ವೈದ್ಯಕೀಯ ಕ್ಷೇತ್ರ ಮಾತ್ರವಲ್ಲದೆ ಡಾ. ಕೆ.ಬಿ. ಧನ್ನೂರ ತಮ್ಮ ಸೇವೆಯನ್ನು ಸಂಗೀತ, ಸಾಮಾಜಿಕ, ಶಿಕ್ಷಣ, ಕೃಷಿ, ರಾಜಕೀಯ ಹೀಗೆ ಅನೇಕ ಕ್ಷೇತ್ರಗಳಲ್ಲಿ ವಿಸ್ತರಿಸಿಕೊಂಡು ಎಲ್ಲದರಲ್ಲಿಯೂ ಸೈ ಎನ್ನಿಸಿಕೊಂಡಿದ್ದಾರೆ. ರಾಜ್ಯದ ಗ್ರಾಮೀಣ ಭಾಗದಲ್ಲಿ ಆಂಗ್ಲ ಮಾಧ್ಯಮ ಶಾಲೆಯನ್ನು ನರೇಗಲ್ಲದಲ್ಲಿ ಪ್ರಾರಂಭಿಸಿದ ಮೊದಲಿಗರಾಗಿದ್ದಾರೆ. ಸ್ವತಃ ಗಾಯಕರಾಗಿರುವ ಅವರು ಅನೇಕ ವಾದ್ಯಗಳ ವಾದಕರೂ ಸಹ ಆಗಿದ್ದಾರೆ.

ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಅಭಿನಂದನಾ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ರೋಣದ ಶ್ರೀ ಗುರುಪಾದ ದೇವರು, ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಮತ್ತು ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳ ನೇತೃತ್ವದಲ್ಲಿ ಕಾನೂನು, ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಮಾಜಿ ಶಾಸಕ ಡಿ.ಆರ್. ಪಾಟೀಲ ಗ್ರಂಥವನ್ನು ಲೋಕಾರ್ಪಣೆಗೊಳಿಸಲಿದ್ದು, ರೋಣ ಶಾಸಕ ಜಿ.ಎಸ್. ಪಾಟೀಲ, ಮಾಜಿ ಶಾಸಕ ಎಸ್.ಜಿ. ನಂಜಯ್ಯನಮಠ ಮತ್ತು ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಮಾಜಿ ಸಂಸದ ಆರ್.ಎಸ್. ಪಾಟೀಲ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

ಗದುಗಿನ ಪಂಡಿತ್ ಪಂಚಾಕ್ಷರ ಗವಾಯಿಗಳವರ ಸಂಗೀತ ಮಹಾವಿದ್ಯಾಲಯದ ಉಪನ್ಯಾಸಕ ವೃಂದದವರಿಂದ ಸಂಗೀತ ಸೇವೆ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

> 1972ರಲ್ಲಿ ಮಿ. ಕೆಎಂಸಿ, ರಾಜ್ಯಮಟ್ಟದ ಮಿ. ಮೆಡಿಕೊ ಪ್ರಶಸ್ತಿಯನ್ನು ದೇಹದಾರ್ಢ್ಯ ಸ್ಪರ್ಧೆಯಲ್ಲಿ ಪಡೆದುಕೊಂಡಿರುವ ಡಾ. ಧನ್ನೂರ 75ರಲ್ಲೂ ಉತ್ಸಾಹದ ಚಿಲುಮೆಯಾಗಿ ಯುವಕರಿಗೆ ಮಾದರಿಯಾಗಿದ್ದಾರೆ. ರೋಣ ಶಾಸಕ ಜಿ.ಎಸ್. ಪಾಟೀಲರು ಗೌರವ ಸಂಪಾದಕರಾಗಿರುವ ಸಮಾಜಮುಖಿ ಅಭಿನಂದನಾ ಗ್ರಂಥದಲ್ಲಿ ಅನೇಕ ವೈದ್ಯರು, ಆತ್ಮೀಯರು, ಬಾಲ್ಯದ ಗೆಳೆಯರು, ಬಂಧುಗಳು ಅವರೊಂದಿಗಿನ ಒಡನಾಟಗಳನ್ನು ಹಂಚಿಕೊಂಡಿದ್ದಾರೆ.

## ಹಲ್ಲೆಗೊಳಗಾದ ದಲಿತ ಬಾಲಕರಿಗೆ ರಕ್ಷಣೆ ನೀಡಿ



■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ತಾಲೂಕಿನ ಬನಹಟ್ಟಿ ಗ್ರಾಮದಲ್ಲಿ ದಲಿತ ಬಾಲಕರ ಮೇಲೆ ಮಾರಣಾಂತಿಕ ಹಲ್ಲೆಯಾಗಿರುವುದನ್ನು ಖಂಡಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿಗಳ ಒಕ್ಕೂಟದಿಂದ ಗದಗ ಜಿಲ್ಲಾ ಒಕ್ಕೂಟ ಸಂಚಾಲಕ ನಾಗರಾಜ ಗೋಕಾವಿ ನೇತೃತ್ವದಲ್ಲಿ ಗದಗ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ನಾಗರಾಜ ಗೋಕಾವಿ, ಮೂವರು ದಲಿತ ವಿದ್ಯಾರ್ಥಿಗಳನ್ನು ಆ ಊರಿನ ಕೋಮುವಾದಿಗಳು ಕೋಮುದ್ವೇಷದೊಂದಿಗೆ ಅರೆಬೆತ್ತಲೆ ಮಾಡಿ ಪಂಚಾಯಿತಿ ಮುಂದೆ ಕಂಬಕ್ಕೆ ಕಟ್ಟಿಹಾಕಿ ಮನಬಂದಂತೆ ಥಳಿಸಿ, ಚಿತ್ರಹಿಂಸೆ ನೀಡಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕಿದ್ದಾರೆ.

ಇದೇ ರೀತಿ ಈ ಗ್ರಾಮದಲ್ಲಿ ನಿರಂತರವಾಗಿ ದಲಿತ ಬಾಲಕರ ಮೇಲೆ, ದಲಿತರ ಮೇಲೆ ದೌರ್ಜನ್ಯಗಳು ನಡೆಯುತ್ತಲೇ ಇವೆ. ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಜೀವದ ಭಯದಲ್ಲಿರುವ ದಲಿತ ಬಾಲಕರಿಗೆ ಸೂಕ್ತ ರಕ್ಷಣೆ ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ದ.ಸಂ.ಸ ಒಕ್ಕೂಟದ ಆನಂದ ಸಿಂಗಾಡಿ, ಬಾಲರಾಜ ಅರಬರ, ಶರೀಫ ಬಿಳೆಯಲಿ, ನರೇಪ್ಪ ನಡಗೇರಿ, ಮುತ್ತು ಬಿಳೆಯಲಿ, ಮುತ್ತಣ್ಣ ಚವಡಣ್ಣವರ, ಶಿವಪ್ಪ ಚಲವಾದಿ, ಶಶಿಕುಮಾರ ಚಲವಾದಿ, ಮಲ್ಲಪ್ಪ ಚಲವಾದಿ, ಲಕ್ಷ್ಮಣ ಚಲವಾದಿ, ಮುತ್ತಪ್ಪ ಚಲವಾದಿ, ರಾಮಪ್ಪ ಚಲವಾದಿ, ಫಕ್ಕೀರಪ್ಪ ಚಲವಾದಿ ಮುಂತಾದವರು ಉಪಸ್ಥಿತರಿದ್ದರು.

## ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲು ಆನ್ಲೈನ್ ಮೂಲಕ https://shp.karnataka.gov.in./bcwd ಅರ್ಜಿ ಆಹ್ವಾನಿಸಿ, ಜೂನ್ 15ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಕೆಲವು ತಾಂತ್ರಿಕ ಕಾರಣಗಳಿಂದ ಅರ್ಜಿ ಸಲ್ಲಿಸಲು ಸಾಧ್ಯವಾಗಿರುವುದಿಲ್ಲವೆಂದು ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸುವಂತೆ ಕೆಲವೊಂದು ಜಿಲ್ಲೆಗಳಿಂದ ಮನವಿಗಳು ಸ್ವೀಕೃತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಕೆಯ ದಿನಾಂಕವನ್ನು ಜೂನ್ 25ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಾರ್ವಜನಿಕರು ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿ ವಹಿಸುವ ಅಗತ್ಯವಿದೆ ಎಂದು ಕುರ್ತಕೋಟಿ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಕ ಮೈಲಾರಪ್ಪ ಬಿಳೆಯಲಿ ಹೇಳಿದರು.

ಅವರು ಪಟ್ಟಣದ ಸಮಿಪದ ಕುರ್ತಕೋಟಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರಲ್ಲಿ ಡೆಂಗ್ಯೂ ಜ್ವರ ಹಾಗೂ ಲಾರ್ವಾ ಸಮೀಕ್ಷೆ ಕುರಿತು ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಸಾರ್ವಜನಿಕರು ಮನೆಯ ಸುತ್ತ-ಮುತ್ತಲು ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಜ್ವರದ ಲಕ್ಷಣ ಕಂಡುಬಂದಲ್ಲಿ ಸಾರ್ವಜನಿಕರು ತಕ್ಷಣ ಸಮೀಪದ ಆರೋಗ್ಯಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷಿಸಿಕೊಳ್ಳಬೇಕು ಎಂದರು.

ಶಾಲಾ ಪ್ರಧಾನ ಗುರು ಎನ್. ಎನ್. ಕುರ್ತಕೋಟಿ, ವಿ.ಬಿ. ಕೆಂಭಾಗಿಮಠ, ಡಿ.ಎಂ. ಬಾಳಿ, ಪಿ.ಆರ್. ಜ್ಯೋಗಿ, ಕೆ.ಎಚ್. ದೊಡ್ಡಗೌಡ್ರ, ಎಸ್. ಎಸ್. ಅಣ್ಣಿಗೇರಿ, ಆರ್.ಬಿ. ಸುಣಗಾರ, ಎಸ್.ಎಂ. ಮರಿಗೌಡ್ರ, ಪ್ರಾಥಮಿಕ ಆರೋಗ್ಯ ಸಂರಕ್ಷಣಾಧಿಕಾರಿ ಸಾವಿತ್ರಿ ಮಾದಪ್ಪನವರ, ಶಾರದಾ ಹನಕನಹಳ್ಳಿ, ದೇವಕ್ಕಾ ಹೂಗಾರ, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

**ಇಟ್ಟಿಗೆರೆಗೆ ಸೇರುತ್ತಿದೆ ವಿಷಯುಕ್ತ ನೀರು । ನಿರಪರಾಧಿ ಜೀವಿಗಳ ಮಾರಣ ಹೋಮ**

# ಜಲಚರಗಳ ಜೀವಕ್ಕೆ ಬೆಲೆಯಿಲ್ಲವೇ...




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಪಟ್ಟಣದ ಇಟ್ಟಿಗೆರೆಗೆ ಚರಂಡಿ ನೀರಿನೊಂದಿಗೆ ಬಂದು ಸೇರುವ ಅಪಾರ ಪ್ರಮಾಣದ ತ್ಯಾಜ್ಯ, ಕೆಮಿಕಲ್ಸ್, ಬಯಲು ಶೌಚ, ಶೌಚದ ವಿಷಯುಕ್ತ ನೀರಿನಿಂದ 12 ಎಕರೆ 30 ಗುಂಟೆ ವಿಸ್ತೀರ್ಣದಲ್ಲಿನ ಸಾವಿರಾರು ಮೀನು, ಜಲಚರ, ಸಸ್ತನಿಗಳ ಮಾರಣ ಹೋಮವಾಗುತ್ತಿದೆ.

ಕೆರೆಗೆ ಹರಿದು ಬರುವ ಮಳೆನೀರಿನ ಮಾರ್ಗಗಳು ಮುಚ್ಚಿದ್ದು, ಕೆರೆ ನೀರಿಗೆ ಕೇವಲ ಚರಂಡಿ ನೀರು, ಗಲೀಜು ಯಥೇಚ್ಛವಾಗಿ ಹರಿದು ಬಂದು ಸೇರುತ್ತಾ ಕೆರೆ ವಿಷಮ ಸ್ಥಿತಿಗೆ ತಲುಪಿರುವುದರಿಂದ ಕೆರೆಯಲ್ಲಿನ ಸಾವಿರಾರು ಮೀನುಗಳು, ಜಲಚರಗಳು ಸತ್ತು ಕೆರೆಯ ಸುತ್ತಲೂ ಬಿದ್ದಿವೆ. ಈ ಕೆರೆಯಲ್ಲಿ ಜಾನುವಾರುಗಳಿಗೆ ನೀರು ಕುಡಿಸಿ ಮೈ ತೊಳೆಯುತ್ತಾರೆ, ಮಹಿಳೆಯರು ಬಟ್ಟೆ ತೊಳೆಯುತ್ತಾರೆ. ರಾಜ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಕೆರೆಯಂಚಿನಲ್ಲಿ ಹತ್ತಾರು ಕುಟುಂಬಗಳು ವಾಸವಿದ್ದು, ಮೀನುಗಳ ಮಾರಣಹೋಮ ಜನರಲ್ಲಿ ಅನಾರೋಗ್ಯದ ಭೀತಿ ಹುಟ್ಟಿಸಿದೆ. ಕೆರೆಯಲ್ಲಿ ಬದುಕುಳಿದಿರುವ ಇನ್ನಷ್ಟು ಜೀವಿಗಳು ವಿಲವಿಲ ಒದ್ದಾಡುತ್ತಿದ್ದು, ಜಲಚರಗಳ ಜೀವಕ್ಕೆ ಬೆಲೆಯಿಲ್ಲವೇ ಎಂಬ ವೇದನೆ ಕಾಡುವಂತಾಗಿದೆ.

ಪಟ್ಟಣದ ಹೃದಯ ಭಾಗದಲ್ಲಿಯೇ ಇರುವ 12 ಎಕರೆ 30 ಗುಂಟೆ ಇಟ್ಟಿಕೆರೆ ಪಟ್ಟಣದ ಜನರ ಜೀವನಾಡಿಯಾಗಿದೆ. ಪಟ್ಟಣದ ಜನ-ಜಾನುವಾರು, ಜಲಚರ ಜೀವಿಗಳಿಗೆ ಆಧಾರವಾದ ಕೆರೆ ಸ್ಥಳೀಯ ಪುರಸಭೆ, ಜನಪ್ರತಿನಿಧಿಗಳು, ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯ, ಬೇಜವಾಬ್ದಾರಿಯಿಂದ ಕೆರೆ ಸಂಪೂರ್ಣ ಕೊಳಚೆ ನೀರು ಮತ್ತು ತ್ಯಾಜ್ಯ ವಿಲೇವಾರಿ ತಾಣವಾಗಿ ಪರಿಣಮಿಸಲು ಕಾರಣವಾಗಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ.

ಈ ಕೆರೆ ಅಭಿವೃದ್ಧಿಯಾಗಬೇಕು ಎಂಬ ಸಾರ್ವಜನಿಕರ ದಶಕಗಳ ಕೂಗಿಗೆ ಎಚ್ಚೆತ್ತ ಪುರಸಭೆ ಇತ್ತೀಚೆಗೆ ಪುರಸಭೆಯ ಕೆರೆ ಅಭಿವೃದ್ಧಿ ಶುಲ್ಕ 56 ಲಕ್ಷ ರೂ ಅನುದಾನಲ್ಲಿ ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರದಿಂದ ಕೆರೆ ಅಭಿವೃದ್ಧಿ ಕಾಮಗಾರಿ ಟೆಂಡರ್ ಹಂತಕ್ಕೆ ತಲುಪಿತ್ತು. ಆದರೆ ಮರು ಟೆಂಡರ್‌ಗೆ ನಿರ್ಣಯಿಸಲಾಗಿ ಮತ್ತೆ ಕೆರೆ ಅಭಿವೃದ್ಧಿ ಕಾರ್ಯಕ್ಕೆ ಗ್ರಹಣ ಹಿಡಿದಿದೆ.

> ಪಟ್ಟಣದಲ್ಲಿನ ಬೋರ್‌ವೆಲ್, ಬಾವಿ ಸೇರಿ ಜಲಮೂಲಗಳಿಗೆ ಇಟ್ಟಿಕೆರೆ ಅಂತರ್ಜಲದ ಮೂಲಾಧಾರವಾಗಿದೆ. ಆದರೆ ಕೆರೆಗೆ ಹರಿದು ಬರುವ ಮಳೆ ನೀರಿನ ಮಾರ್ಗಗಳು ಮುಚ್ಚಿದ್ದು, ಕೇವಲ ಚರಂಡಿ ನೀರು, ಅದರೊಂದಿಗೆ ತ್ಯಾಜ್ಯ ಮಾತ್ರ ಯಥೇಚ್ಛವಾಗಿ ಹರಿದು ಬಂದು ಸಂಗ್ರಹವಾಗುತ್ತಿದೆ. ಕೆರೆಗೆ ಚರಂಡಿ ನೀರು ಸೇರಬಾರದು. ಅಭಿವೃದ್ಧಿಗೆ ಅನುದಾನ ಮತ್ತು ಸಹಕಾರ ಇದ್ದು, ಮಾಡುವ ಇಚ್ಛಾಶಕ್ತಿ, ಅಭಿವೃದ್ಧಿಪರ ಚಿಂತನಾ ಮನೋಭಾವದ ಅಗತ್ಯವಿದೆ. ಇನ್ನಾದರೂ ಸಂಬಂಧಪಟ್ಟವರು ಇತ್ತ ಗಮನ ಹರಿಸಿ ಕೆರೆ ಅಭಿವೃದ್ಧಿಯ ಪುಣ್ಯದ ಕಾರ್ಯದ ಮೂಲಕ ಮಾರಣಹೋಮದ ಪ್ರಾಯಶ್ಚಿತ್ತ ಮಾಡಿಕೊಳ್ಳಬೇಕು.
>
> **– ಸೋಮೇಶ ಉಪನಾಳ,**
> ಗಣೇಶ ಬೇವಿನಮರದ–ನಾಗರಿಕರು.

> ಪುರಸಭೆಯ ಕೆರೆ ಅಭಿವೃದ್ಧಿ ನಿಧಿ 56 ಲಕ್ಷ ರೂದಲ್ಲಿ ಅಭಿವೃದ್ಧಿ ಕಾಮಗಾರಿ ಸದ್ಯದಲ್ಲಿಯೇ ಕೈಗೊಳ್ಳಲಾಗುತ್ತಿದೆ. ಈಗಾಗಲೇ ಕೆರೆ ಅಭಿವೃದ್ಧಿಗೆ ಕರೆಯಲಾದ ಟೆಂಡರ್ ರದ್ದುಗೊಂಡಿದ್ದು, ಮರು ಟೆಂಡರ್ ಕರೆಯಲಾಗಿದೆ. ಅಭಿವೃದ್ಧಿ ಸಮಯದಲ್ಲಿ ಕೆರೆಗೆ ಹರಿದು ಬರುವ ಚರಂಡಿಯ ತ್ಯಾಜ್ಯ, ಗಲೀಜು, ವಿಷಯುಕ್ತ ನೀರು ಕೆರೆ ಸೇರದಂತೆ ಮಾಡಲಾಗುವುದು. ಕೆರೆಯ ಪ್ರದೇಶದ ಸ್ವಚ್ಛತೆ ಮತ್ತು ಆರೋಗ್ಯಕರ ಪರಿಸರಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.
>
> **– ಮಂಜುನಾಥ ಮುದಗಲ್.**
> ಹಿರಿಯ ಆರೋಗ್ಯ ನಿರೀಕ್ಷಕ.

## ಭಾರತದಲ್ಲಿ ಇಂಗ್ಲಿಷ್ ಮಾತನಾಡುವವರು ಶೀಘ್ರದಲ್ಲೇ ನಾಚಿಕೆಪಡುತ್ತಾರೆ: ಅಮಿತ್ ಶಾ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಭಾರತದಲ್ಲಿ ಇಂಗ್ಲಿಷ್ ಮಾತನಾಡುವವರು ಶೀಘ್ರದಲ್ಲೇ ನಾಚಿಕೆಪಡುತ್ತಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು, ದೇಶದಲ್ಲಿ ಇಂಗ್ಲಿಷ್ ಮಾತನಾಡುವವರು ಶೀಘ್ರದಲ್ಲೇ ನಾಚಿಕೆಪಡುತ್ತಾರೆ. ಸ್ಥಳೀಯ ಭಾಷೆಗಳು ಭಾರತದ ಗುರುತಿನ ಕೇಂದ್ರವಾಗಿದ್ದು, ವಿದೇಶಿ ಭಾಷೆಗಳಿಗಿಂತ ಹೆಚ್ಚು ಆದ್ಯತೆ ನೀಡಬೇಕು ಎಂದು ಒತ್ತಿ ಹೇಳಿದ್ದಾರೆ.

ಈ ದೇಶದಲ್ಲಿ ಇಂಗ್ಲಿಷ್ ಮಾತನಾಡುವವರು ಶೀಘ್ರದಲ್ಲೇ ನಾಚಿಕೆಪಡುತ್ತಾರೆ. ಅಂತಹ ಸಮಾಜದ ಸೃಷ್ಟಿಯು ದೂರವಿಲ್ಲ. ನಮ್ಮ ದೇಶದ ಭಾಷೆಗಳು ನಮ್ಮ ಸಂಸ್ಕೃತಿಯ ರತ್ನಗಳು ಎಂದು ನಾನು ನಂಬುತ್ತೇನೆ. ನಮ್ಮ ಭಾಷೆಗಳಿಲ್ಲದೆ, ನಾವು ನಿಜವಾದ ಭಾರತೀಯರಾಗುವುದಿಲ್ಲ ಎಂದಿದ್ದಾರೆ. ಭಾರತದ ಭಾಷಾ ಪರಂಪರೆಯನ್ನು ಮರಳಿ ಪಡೆಯಲು ದೇಶಾದ್ಯಂತ ನವೀಕೃತ ಪ್ರಯತ್ನಕ್ಕೆ ಕರೆ ನೀಡಿದರು. ಪ್ರಪಂಚದಾದ್ಯಂತ ವಸಾಹತುಶಾಹಿ ಗುಲಾಮಗಿರಿಯ ಸಂಕೇತವಾಗಿ ಇಂಗ್ಲಿಷ್ ಅನ್ನು ತಿರಸ್ಕರಿಸಲಾಗುವುದು ಎಂದು ನುಡಿದಿದ್ದಾರೆ.

ನಮ್ಮ ದೇಶ, ನಮ್ಮ ಸಂಸ್ಕೃತಿ, ನಮ್ಮ ಇತಿಹಾಸ ಮತ್ತು ನಮ್ಮ ಧರ್ಮವನ್ನು ಅರ್ಥಮಾಡಿಕೊಳ್ಳಲು ಯಾವುದೇ ವಿದೇಶಿ ಭಾಷೆ ಸಾಕಾಗುವುದಿಲ್ಲ.

ಅರೆಬೆಂದ ವಿದೇಶಿ ಭಾಷೆಗಳ ಮೂಲಕ ಸಂಪೂರ್ಣ ಭಾರತದ ಕಲ್ಪನೆಯನ್ನು ಕಲ್ಪಿಸಿಕೊಳ್ಳಲಾಗುವುದಿಲ್ಲ ಎಂದು ಪ್ರತಿಪಾದಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka